ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 14 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 15–07–2023 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 14 | Title- Code: KARKAN 28269 | Chitradurga | Date: 15-07-2023 Saturday | Page: 4 | Price: Rs. 2-00

**ಒಳಪುಟದ ಸುದ್ದಿಗಳು**

ನಗರಸಭೆ ಪೌರಾಯುಕ್ತರಾಗಿ 3ನೇ ಬಾರಿಗೆ ಕೆ.ಲೀಲಾವತಿ ಅಧಿಕಾರ ಪದಗ್ರಹಣ 2

ಐಯ್ಯನಹಳ್ಳಿ ಕುರುಬರಹಟ್ಟಿ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ: ಗ್ರಾಮಸ್ಥರ ಪ್ರತಿಭಟನೆ 3

ಜುಲೈ 14, 2023 ಸುವರ್ಣಾಕ್ಷರಗಳಲ್ಲಿ ಅಚ್ಚಳಿಯದೆ ಉಳಿಯಲಿದೆ: ಮೋದಿ 4

## ಫಾಸ್ಟ್ ನ್ಯೂಸ್

### ಜೀವದ ಹಂಗು ತೊರೆದು ಸಹೋದರನ ರಕ್ಷಿಸಿದ ಸಹೋದರಿ



» **ತುಮಕೂರು**

ಜೀವದ ಹಂಗು ತೊರೆದು ಸಹೋದರಿ ಸಹೋದರನ ಜೀವ ರಕ್ಷಿಸಿರುವ ಘಟನೆ ತುಮಕೂರು ತಾಲೂಕಿನ ಕುಚ್ಚಂಗಿಯಲ್ಲಿ ನಡೆದಿದೆ. ಬಾವಿಗೆ ಬಿದ್ದಿದ್ದ ತಮ್ಮ ಹಿಮಾಂಶುನನ್ನು ಸಹೋದರಿ ಶಾಲೂ ರಕ್ಷಿಸಿದ್ದಾಳೆ. ಉತ್ತರ ಪ್ರದೇಶ ಮೂಲದ ಜೀತೇಂದ್ರ, ರಾಜಕುಮಾರಿ ದಂಪತಿ ಕುಚ್ಚಂಗಿಯಲ್ಲಿನ ತೋಟದ ಮನೆಯಲ್ಲಿ ಕೆಲಸಕ್ಕೆ ಇದ್ದಾರೆ. ದಂಪತಿಗೆ ಒಟ್ಟು ನಾಲ್ವರು ಮಕ್ಕಳು. ಶಾಲೂ(8), ಹಿಮಾಂಶು(7), ರಾಶಿ(3), ಹಾಗೂ ಕಪಿಲ್(2). ನಿನ್ನೆ (ಜು.13) ಹಿಮಾಂಶು ಹಾಗೂ ರಾಶಿ ತೋಟದಲ್ಲಿ ಆಟವಾಡುತ್ತಿದ್ದರು. ಈ ವೇಳೆ ಬಾವಿಗೆ ಬಿದ್ದ ಚೆಂಡು ತೆಗೆಯಲು ಹೋಗಿ ಹಿಮಾಂಶು ಬಾವಿಯಲ್ಲಿ ಬಿದ್ದು ಜೀವನ್ಮರಣ ಹೋರಾಟ ನಡೆಸುತ್ತಿದ್ದನು. ಇದನ್ನು ಕಂಡು ಶಾಲೂ ಲೈಫ್ ಜಾಕೀಟ್ ಧರಿಸಿ ಬಾವಿಗೆ ಜಿಗಿದಿದ್ದಾಳೆ. ಇದೇ ವೇಳೆ ಶಾಲೂ ಸಹಾಯಕ್ಕೆ ಅಕ್ಕಪಕ್ಕದ ಜನರು ಆಗಮಿಸಿದ್ದಾರೆ. ನಂತರ ಸ್ಥಳೀಯರು ಬಾವಿಯಿಂದ ಇಬ್ಬರನ್ನು ಮೇಲಕ್ಕೆ ಎತ್ತಿದ್ದಾರೆ.

### ಡೆಪಾಸಿಟ್ ಮಷಿನ್‌ನಲ್ಲಿ 52 ಸಾವಿರ ಇಟ್ಟು ಬಟನ್ ಒತ್ತುವದೇ ಮರೆತು 50 ಕಳೆದುಕೊಂಡ ಗ್ರಾಹಕ

» **ದಾವಣಗೆರೆ**

ಬ್ಯಾಂಕ್‌ಗೆ ಹಣ ಡೆಪಾಸಿಟ್ ಮಾಡುವ ಮಷಿನ್‌ನನ್ನು ವ್ಯಕ್ತಿಯೊಬ್ಬ 52 ಸಾವಿರ ರೂಪಾಯಿ ಡೆಪಾಸಿಟ್ ಮಾಡಲು ಬಂದಿದ್ದಾನೆ. ಆತ ಹಣವನ್ನು ಮಷಿನ್‌ನಲ್ಲಿ ಇಟ್ಟು ಎಂಟರ್ ಮಾಡಿದ್ದಾನೆ. ಅದನ್ನು ಮಷಿನ್ ಎಣಿಸಿದೆ. ಅನಂತರ ಡೆಪಾಸಿಟ್ ಬಟನ್ ಒತ್ತುವುದನ್ನು ಮರೆತು ಡೆಪಾಸಿಟ್ ಆಗಿದೆ ಎಂದೇ ತಿಳಿದು ಅಲ್ಲಿಂದ ತೆರಳಿದ್ದಾನೆ. ಅನಂತರ ಬಂದ ಗ್ರಾಹಕನಿಗೆ ಆ ಹಣ ಕಾಣಿಸಿದೆ. ಕೂಡಲೇ ಆತ ಅದನ್ನು ಎತ್ತಿಕೊಂಡು ಎಸ್ಕೇಪ್ ಆಗಿದ್ದಾನೆ. ಇದು ದಾವಣಗೆರೆಯ ಪಿಬಿ ರಸ್ತೆಯ ರಿಲಾಯನ್ಸ್ ಮಾರ್ಟ್ ಎದುಗಿರಿಉವ ಐಸಿಐಸಿಐ ಬ್ಯಾಂಕ್ ಎಟಿಎಂ ಕೇಂದ್ರ್ರದಲ್ಲಿ ನಡೆದಿದೆ. ವಿಜಯ್ ಎಂಬುವ ವರಿಗೆ ಸೇರಿದ ಹಣ ಇದಾಗಿದೆ. ಈ ಹಣವನ್ನು ಮತ್ತೊಬ್ಬ ವ್ಯಕ್ತಿ ತೆಗೆದುಕೊಂಡು ಹೋಗಿದ್ದಾನೆ. ಈ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಕೆಟಿಜೆ ನಗರಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಆಗಸ್ಟ್ ತಿಂಗಳು ನಿಮ್ಮ ಮನೆಗೆ ಬರ್ತಾಳೆ ಗೃಹಲಕ್ಷ್ಮಿ

» **ಬೆಂಗಳೂರು**

ರಾಜ್ಯಸರ್ಕಾರ ಘೋಷಿಸಿರುವ 5 ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯಡಿ ಮನೆ ಒಡತಿಗೆ ಮಾಸಿಕ 2 ಸಾವಿರ ರೂ. ನೀಡುವ ಯೋಜನೆಗೆ ಸಂಬಂಧಿಸಿದಂತೆ ಶೀಘ್ರದಲ್ಲೇ ಆ್ಯಪ್ ಬಿಡುಗಡೆ ಮಾಡಿ ನೋಂದಣಿ ಪ್ರಕ್ರಿಯೆ ಆರಂಭಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿಧಾನ ಪರಿಷತ್‌ನಲ್ಲಿಂದು ತಿಳಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆ ಫಲಾನುಭವಿಗಳಿಗೆ ಮುಂದಿನ ತಿಂಗಳಿನಿಂದಲೇ (ಆಗಸ್ಟ್ 16 ಅಥವಾ 17) ರಂದು ಫಲಾನುಭವಿಗಳ ಖಾತೆಗೆ ನೇರ ಹಣ ಪಾವತಿಸಲಾಗುವುದು. ಈ ಬಗ್ಗೆ ಯಾರಿಗೂ ಯಾವುದೇ ರೀತಿಯ ಅನುಮಾನ ಗೊಂದಲ ಬೇಡ ಎಂದು ಮನವಿ ಮಾಡಿದರು.

ಬೆಲೆ ಏರಿಕೆಯಿಂದ ತತ್ತರಿಸಿರುವ ರಾಜ್ಯದ ಜನರನ್ನು ಅದರಲ್ಲೂ ಮಹಿಳೆಯರನ್ನು ಕಾಪಾಡುವ ಹಿತದೃಷ್ಟಿಯಿಂದ ಗೃಹಲಕ್ಷ್ಮಿ ಯೋಜನೆ ಗ್ಯಾರಂಟಿಯನ್ನು ಸರ್ಕಾರ ಪ್ರಕಟಿಸಿದೆ. ಅದನ್ನು ಜಾರಿ ಮಾಡುವುದು ಗ್ಯಾರಂಟಿ. ಈ ಬಗ್ಗೆ ಯಾವುದೇ ಗೊಂದಲ ಬೇಡ ಎಂದರು.ಹೇಮಲತಾ ನಾಯಕ್ ಪ್ರಶ್ನೆಗೆ ಉತ್ತರಿಸಿದ ಸಚಿವರು ಯಾವುದೇ ಸರ್ವರ್ ಸಮಸ್ಯೆ ಇಲ್ಲ, ನಾಲ್ಕೈದು ದಿನಗಳಲ್ಲಿ ಗೃಹಲಕ್ಷ್ಮಿ ಯೋಜನೆಯ ಆಪ್ ಬಿಡುಗಡೆ ಮಾಡಿ ಆ ಮೂಲಕ ನೋಂದಣಿ ಪ್ರಕ್ರಿಯೆ ಆರಂಭಿಸಲಾಗುವುದು ಎಂದರು. ಗೃಹಲಕ್ಷ್ಮಿ ಯೋಜನೆಗೆ ಅಂದಾಜು 30 ಸಾವಿರ ಕೋಟಿ ಅಗತ್ಯವಿದೆ. ಪ್ರಸಕ್ತ ಮುಂಗಡ ಪತ್ರದಲ್ಲಿ 17,500 ಕೋಟಿ ಅನುದಾನ ಒದಗಿಸಲಾಗಿದೆ ಎಂದರು.



**ಗೃಹಲಕ್ಷ್ಮಿ ಮುಂದಿನ ತಿಂಗಳಿನಿಂದ ಜಾರಿ**

- ಆ. 16, 17 ರಿಂದ ಫಲಾನುಭವಿಗಳ ಖಾತೆಗೆ ಹಣ
- ಪ್ರತಿ ತಿಂಗಳು 2 ಸಾವಿರ ಜಮೆ
- 3-4 ದಿನಗಳಲ್ಲಿ ಆಪ್ ಬಿಡುಗಡೆ
- ಆ ಮೂಲಕ ನೋಂದಣಿ ಪ್ರಕ್ರಿಯೆ ಆರಂಭ
- ಪ್ರಸಕ್ತ ಸಾಲಿನಲ್ಲಿ 17,500 ಕೋಟಿ ರೂ. ನಿಗದಿ

# ಆರೆಸ್ಸೆಸ್‌ಗೆ ನೀಡಿದ 35 ಎಕರೆ 33 ಗುಂಟೆ ಗೋಮಾಳ ಜಮೀನು ತಡೆ ಹಿಡಿದ ಸರ್ಕಾರ

» **ಬೆಂಗಳೂರು**

ರಾಷ್ಟ್ರೀಯ ಸ್ವಯಂಸೇವಕ ಸಂಘಕ್ಕೆ (ಆರೆಸ್ಸೆಸ್) ಸೇರಿದ ಜನಸೇವಾ ಟ್ರಸ್ಟ್‌ಗೆ ಬೆಂಗಳೂರು ದಕ್ಷಿಣ ತಾಲ್ಲೂಕಿನ ಕುರುಬರಹಳ್ಳಿ ಗ್ರಾಮದ ತಾವರೆಕೆರೆ ಹೋಬಳಿಯಲ್ಲಿ ಈ ಹಿಂದಿನ ಬಿಜೆಪಿ ನೇತೃತ್ವದ ಸರ್ಕಾರ 35 ಎಕರೆ 33 ಗುಂಟೆ ಗೋಮಾಳ ಜಮೀನು ನೀಡಿದ್ದ ಕ್ರಮಕ್ಕೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ತಡೆ ನೀಡಲು ಆದೇಶಿಸಿದೆ.

ಕಳೆದ ಸೆಪ್ಟೆಂಬರ್‌ನಲ್ಲಿ ಗೋಮಾಳ ಭೂಮಿಯನ್ನು ಬಿಜೆಪಿ ಸರ್ಕಾರ ಜನಸೇವಾ ಟ್ರಸ್ಟ್‌ಗೆ ನೀಡಿತ್ತು. 2023ರ ಮೇ 22ರಂದು ಜಿಲ್ಲಾಧಿಕಾರಿ ಮಂಜೂರು ಆದೇಶ ಹೊರಡಿಸಿದ್ದರು. ಗೋಮಾಳವು ಜಾನುವಾರುಗಳ ಮೇವಿಗಾಗಿ ಮೀಸಲಿರಿಸಿದ ಸರ್ಕಾರಿ ಭೂಮಿಯಾಗಿದೆ.

ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಐದು ದಿನಗಳ ನಂತರ, ಅಂದರೆ ಮೇ 25ರಂದು ಸಿದ್ದರಾಮಯ್ಯ ಅವರು, ಜಮೀನು ಮಂಜೂರಾತಿ ಆದೇಶದ ವಿಷಯದಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕಿನಲ್ಲಿ ಎಷ್ಟು ಸರ್ಕಾರಿ ಜಮೀನನ್ನು ಸಂಘ ಸಂಸ್ಥೆಗಳಿಗೆ, ಇಲಾಖೆಗಳಿಗೆ ಮತ್ತು ವಿವಿಧ ಉದ್ದೇಶಗಳಿಗೆ ನೀಡಲಾಗಿದೆ ಎಂದು ಬಿಜೆಪಿ ಶಾಸಕ ಎಸ್.ಟಿ. ಸೋಮಶೇಖರ್ ಕೇಳಿದ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಕಂದಾಯ ಸಚಿವ ಕೃಷ್ಣ ಬೈರೇಗೌಡ, ಜನಸೇವಾ ಟ್ರಸ್ಟ್‌ಗೆ 35 ಎಕರೆ 33 ಗುಂಟೆ ಮಂಜೂರು ಮಾಡುವುದನ್ನು ತಡೆಹಿಡಿಯಲಾಗಿದೆ ಎಂಬ ಮುಖ್ಯಮಂತ್ರಿಯವರ ಸೂಚನೆಯನ್ನು ಉಲ್ಲೇಖಿಸಿದ್ದಾರೆ.

ಈ ಬಗ್ಗೆ ಮಾಧ್ಯಮಕ್ಕೆ ಪ್ರತಿಕ್ರಿಯಿಸಿದ ಕೃಷ್ಣ ಬೈರೇಗೌಡ, 'ಮುಖ್ಯಮಂತ್ರಿ ನೀಡಿರುವ ಈ ಸೂಚನೆ ಕೇವಲ ಜನಸೇವಾ ಟ್ರಸ್ಟ್‌ಗೆ ಮಾತ್ರ ಅನ್ವಯಿಸುವುದಿಲ್ಲ. ವಿಧಾನಸಭೆ ಚುನಾವಣೆಗೆ ಕೆಲವೇ ತಿಂಗಳುಗಳ ಮೊದಲು ಮಾಡಿದ್ದ ಎಲ್ಲ ಜಮೀನು ಹಂಚಿಕೆಗಳಿಗೂ ಅನ್ವಯ ಆಗಲಿದೆ' ಎಂದರು.

'ತರಾತುರಿಯಲ್ಲಿ ಜಮೀನು ಮಂಜೂರು ಮಾಡಿರುವ ಎಲ್ಲ ಪ್ರಕರಣಗಳನ್ನು ನಾವು ಪರಿಶೀಲಿಸುತ್ತಿದ್ದೇವೆ. ಗೋಶಾಲೆಯ ಉದ್ದೇಶಕ್ಕಾಗಿ ಒಂದು ಲಾಭರಹಿತ ಸಂಸ್ಥೆಗೆ 35 ಎಕರೆ ಜಮೀನು ನೀಡಲಾಗಿದೆ' ಎಂದ ಸಚಿವರು, 'ನಾವು ಅರ್ಹತೆ ಮತ್ತು ಉದ್ದೇಶದ ಆಧಾರದಲ್ಲಿ ಭೂಮಿ ಮಂಜೂರಾತಿಯನ್ನು ಪರಿಶೀಲಿಸುತ್ತೇವೆ. ಸಾರ್ವಜನಿಕ ಹಿತಾಸಕ್ತಿ ಇದೆಯೇ ಅಥವಾ ಇಲ್ಲವೇ ಎಂಬುದನ್ನೂ ನೋಡುತ್ತೇವೆ' ಎಂದೂ ವಿವರಿಸಿದರು.ಮಾಗಡಿ ರಸ್ತೆಯ ಚನ್ನೇನಹಳ್ಳಿಯಲ್ಲಿ ಜನಸೇವಾ ಟ್ರಸ್ಟ್ ಶಿಕ್ಷಣ ಸಂಸ್ಥೆಗಳನ್ನು ನಡೆಸುತ್ತಿದೆ.

ಪುಟ ↘ 2

# ಕರ್ನಾಟಕದಿಂದಲೇ ಬಿಜೆಪಿ ಅವನತಿ: ಸಿಎಂ ಸಿದ್ದರಾಮಯ್ಯ

» **ಬೆಂಗಳೂರು**

ಇಷ್ಟು ದಿನವಾದ್ರೂ ಬಿಜೆಪಿ ವಿಪಕ್ಷ ನಾಯಕರ ಆಯ್ಕೆ ಮಾಡಲು ಆಗಿಲ್ಲ. ಬಿಜೆಪಿ ಇಷ್ಟು ರಾಜಕೀಯ ದಿವಾಳಿ ಆಗುತ್ತೆ ಎಂದು ಗೊತ್ತಿರಲಿಲ್ಲ. ಒಬ್ಬ ವಿರೋಧ ಪಕ್ಷದ ನಾಯಕ ಇಲ್ಲ ಅಂತ ನಮಗೆ ವ್ಯಥೆ ಇದೆ. ವಿಧಾನಸಭೆಯಲ್ಲಿ ಹೆಚ್‌ಡಿ ಕುಮಾರಸ್ವಾಮಿಯವರನ್ನು ಆಯ್ಕೆ ಮಾಡಲು ನಿರ್ಧರಿಸಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಬಿಜೆಪಿನ್ನು ಕುಟುಕಿದರು.



ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ವಿಪಕ್ಷ ನಾಯಕ ಇರಬೇಕು. ಕೋಮುವಾದ ವಿರೋಧಿಸಿ ಜನ ನಮಗೆ ಅವಕಾಶ ಕೊಟ್ಟಿದ್ದಾರೆ. 7 ಜಿಲ್ಲೆಗಳಲ್ಲಿ ಬಿಜೆಪಿಯ ಒಬ್ಬ ಅಭ್ಯರ್ಥಿಯೂ ಗೆಲ್ಲಲು ಆಗಲಿಲ್ಲ. ಅಧಿಕಾರದಲ್ಲಿದ್ದಾಗ ಬಿಜೆಪಿಯವರು ಮಾಡಬಾರದನ್ನು ಮಾಡಿದರು. ಅದಕ್ಕಾಗಿಯೇ ಜನ ನಿಮ್ಮನ್ನು ಅಲ್ಲಿ ಕೂರಿಸಿದ್ದಾರೆ. ಬಿಜೆಪಿ ಅಧಿಕಾರಕ್ಕೆ ಬರೋದು ಬೇಡ, ವಿಪಕ್ಷದಲ್ಲೇ ಇರಬೇಕು. ಬಿಜೆಪಿಯವರು ಜನಪರ ಕೆಲಸ, ಬಡವರ ಪರ ಕೆಲಸ ಮಾಡಲ್ಲ ಎಂದರು. ಬಿಜೆಪಿ ಅವನತಿ ಕರ್ನಾಟಕದಿಂದ ಶುರುವಾಗಿದೆ. ಪ್ರಧಾನಿ ಮೋದಿ ಜನಪ್ರಿಯತೆ ದಿನೇ ದಿನೆ ಕುಸಿಯುತ್ತಿದೆ. ಪ್ರಧಾನಿ ನರೇಂದ್ರ ಮೋದಿಯವರು ತಮಿಳುನಾಡಿನ ಸೇಡಂನಲ್ಲಿ ಪ್ರಚಾರ ಮಾಡಿದರು. ಸೇಡಂನಲ್ಲಿ ಕಾಂಗ್ರೆಸ್ 45 ಸಾವಿರ ಮತಗಳ ಅಂತರದಲ್ಲಿ ಗೆದ್ದಿತು. ನಾವು ಜನರಿಗೆ ಹಣ ನೀಡುತ್ತೇವೆ. ಆದರೆ ಬಿಜೆಪಿ ಜನರ ಜೇಬಿನಿಂದ ಹಣ ಕಿತ್ತುಕೊಂಡರು ಅದಕ್ಕಾಗಿ ಜನರು ತಕ್ಕ ಪಾಠ ಕಲಿಸಿದ್ದಾರೆ. ಈ ಬಾರಿ ನಮ್ಮ ಪಕ್ಷ ಶೇ.42.9ರಷ್ಟು ಮತ ಪಡೆದುಕೊಂಡಿದೆ. ವಿಧಾನಸಭೆ ಚುನಾವಣೆಯಲ್ಲಿ 135 ಸ್ಥಾನಗಳನ್ನು ಪಕ್ಷ ಗೆದ್ದಿದೆ. ಸ್ಪಷ್ಟ ಬಹುಮತದೊಂದಿಗೆ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಬಿಜೆಪಿ ಯಾವತ್ತೂ ಸ್ಪಷ್ಟ ಬಹುಮತದಿಂದ ಅಧಿಕಾರಕ್ಕೆ ಬಂದಿಲ್ಲ. ಬಿಜೆಪಿ 2 ಬಾರಿಯೂ ಹಿಂಬಾಗಿಲಿನಿಂದ ಅಧಿಕಾರಕ್ಕೆ ಬಂದಿದೆ ಎಂದು ವಿಧಾನಪರಿಷತ್‌ನಲ್ಲಿ ಸಿಎಂ ವಾಗ್ದಾಳಿ ನಡೆಸಿದರು.

## ಬಿಡಿಎಎ ಫುಟ್ಬಾಲ್ ಮೈದಾನ, ಕ್ರೀಡಾ ವಸತಿ ನಿಲಯಕ್ಕೆ ಸಚಿವ ಬಿ.ನಾಗೇಂದ್ರ ಭೇಟಿ



» **ಬಳ್ಳಾರಿ**

ನಗರದ ಡಾ.ರಾಜ್ಕುಮಾರ್ ರಸ್ತೆಯ ಬಿಡಿಎಎ ಫುಟ್ಬಾಲ್ ಕ್ರೀಡಾಂಗಣ ಹಾಗೂ ಕ್ರೀಡಾ ವಸತಿನಿಲಯಕ್ಕೆ ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಚಿವ ಬಿ.ನಾಗೇಂದ್ರ ಅವರು ಗುರುವಾರ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ಈ ಸಂದರ್ಭದಲ್ಲಿ ಸಚಿವ ಬಿ. ನಾಗೇಂದ್ರ ಅವರು, ಕ್ರೀಡಾ ವಸತಿನಿಲಯದ ವಿದ್ಯಾರ್ಥಿಗಳ ಜೊತೆ ಸಂವಾದ ನಡೆಸಿ, ಊಟೋಪಹಾರ ಸೇರಿದಂತೆ ಇಲಾಖೆಯಿಂದ ದೊರೆಯುತ್ತಿರುವ ಸೌಲಭ್ಯ ಹಾಗೂ ತರಬೇತಿಗಳ ಕುರಿತು ಮಾಹಿತಿ ಪಡೆದರು. ಕ್ರೀಡಾ ಇಲಾಖೆ ಅಧಿಕಾರಿಗಳು ಹಾಗೂ ಕೋಚ್ಗಳೊಂದಿಗೂ ಮಾತನಾಡಿದರು.

**ಪ್ರಮುಖ ಸುದ್ದಿ**

# ಶಕ್ತಿ ಯೋಜನೆ: ಧರ್ಮಸ್ಥಳಕ್ಕೆ ಭಕ್ತರು ದಂಡು

## ಸಿಎಂಗೆ ಪತ್ರ ಬರೆದು ಅಭಿನಂದನೆ ಸಲ್ಲಿಸಿದ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆ

» **ಧರ್ಮಸ್ಥಳ**

ಐತಿಹಾಸಿಕ 14 ನೇ ರಾಜ್ಯ ಬಜೆಟ್ ಮಂಡಿಸಿದ ಹಾಗೂ ಗ್ಯಾರೆಂಟಿ ಜನಪರ ಕಾರ್ಯಕ್ರಮಗಳನ್ನು ಪ್ರಕಟಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ರಾಜ್ಯಸಭಾ ಸದಸ್ಯರೂ ಆಗಿರುವ ಧರ್ಮಸ್ಥಳದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆ ಅಭಿನಂದನೆ ಪತ್ರ ಬರೆದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಈ ಪತ್ರವನ್ನು ಟ್ವೀಟರ್ ನಲ್ಲಿ ಹಂಚಿಕೊಂಡಿರುವ ಮುಖ್ಯಮಂತ್ರಿ, 14 ನೇ ಬಜೆಟ್ ನ ಫಲಶೃತಿಯನ್ನು ಶ್ಲಾಘಿಸಿ ಹಾಗೂ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಶಕ್ತಿ ಯೋಜನೆಗೆ ಸಿಕ್ಕಿರುವ ಜನ ಮನ್ನಣೆಗೆ ಮೆಚ್ಚುಗೆ ವ್ಯಕ್ತಪಡಿಸಿ ಡಿ. ವೀರೇಂದ್ರ ಹೆಗ್ಗಡೆ ಅವರು ಪತ್ರ ಬರೆದಿರುವುದಾಗಿ ತಿಳಿಸಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದಿಂದ ಮೊದಲ ಗ್ಯಾರಂಟಿಯಾಗಿ ಮಹಿಳೆಯರ ಉಚಿತ ಪ್ರಯಾಣಕ್ಕಾಗಿ ಜಾರಿಗೊಳಿಸಲಾದ



'ಶಕ್ತಿ ಯೋಜನೆ' ಯಿಂದ ಧರ್ಮಸ್ಥಳಕ್ಕೆ ಬರುವ ಮಹಿಳೆಯ ಪ್ರಮಾಣ ಹೆಚ್ಚಾಗಿದೆ. ಮಂಜುನಾಥ ಸ್ವಾಮಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹೆಸರಿನಲ್ಲಿ ಕಾಣಿಕೆ ಹಾಕುತ್ತಿದ್ದಾರೆ.

ಪುಟ ↘ 2



## ಫಾಸ್ಟ್ ನ್ಯೂಸ್

### ಶಕ್ತಿ ಯೋಜನೆ: ಧರ್ಮಸ್ಥಳಕ್ಕೆ ಭಕ್ತರು ದಂಡು

» ಮೊದಲ ಪುಟದಿಂದ

ಇನ್ನು ಮುಂದಿನ ದಿನಗಳಲ್ಲಿ ಅವಕಾಶ ಇದ್ದಾಗ ಧರ್ಮಸ್ಥಳಕ್ಕೆ ಬಂದು ಮಂಜುನಾಥ ಸ್ವಾಮಿಯ ದರ್ಶನ ಪಡೆದುಕೊಂಡು ಹೋಗಿ ಎಂದು ಸಿಎಂ ಸಿದ್ದರಾಮಯ್ಯ ಅವರಿಗೆ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರು ಆಹ್ವಾನ ನೀಡಿದ್ದಾರೆ..

**ಸಿಎಂ ಟ್ವೀಟ್:** ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿಗಳಾದ ಶ್ರೀ ಡಿ.ವೀರೇಂದ್ರ ಹೆಗ್ಗಡೆಯವರು ನಾನು ಮಂಡಿಸಿದ 14 ನೇ ಬಜೆಟ್ ನ ಫಲಶೃತಿಯನ್ನು ಶ್ಲಾಘಿಸಿ ಹಾಗೂ ನಮ್ಮ ಸರ್ಕಾರದ ಮಹತ್ವಾಕಾಂಕ್ಷೆಯ ಶಕ್ತಿ ಯೋಜನೆಗೆ ಸಿಕ್ಕಿರುವ ಜನ ಮನ್ನಣೆಗೆ ಮೆಚ್ಚುಗೆ ಸೂಚಿಸಿ ಬರೆದಿರುವ ಪತ್ರಕ್ಕೆ ಧನ್ಯವಾದಗಳು.

### ಚಾಮುಂಡಿಬೆಟ್ಟದಲ್ಲಿ ಆಷಾಢ ಶುಕ್ರವಾರದ ಸಂಭ್ರಮ

» **ಮೈಸೂರು**

ಚಾಮುಂಡಿಬೆಟ್ಟದಲ್ಲಿ 4ನೇ ಆಷಾಢ ಶುಕ್ರವಾರದ ಸಡಗರ ಸಂಭ್ರಮ ಮನೆ ಮಾಡಿದೆ.ನಾಡ ಅದೇವತೆ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಇಂದು ದೇವಿ ಚಾಮುಂಡಿ ಸನ್ನಿಗೆ ಭಕ್ತಸಾಗರ ಹರಿದುಬಂದಿತ್ತುಗಂಟೆಗಳ ಕಾಲ ಸರದಿಯಲ್ಲಿ ನಿಂತ ಭಕ್ತರು ಚಾಮುಂಡಿತಾಯಿಯ ದರ್ಶನ ಪಡೆದರು. ಕೊನೆಯ ಆಷಾಢ ಶುಕ್ರವಾರ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಚಾಮುಂಡಿ ಬೆಟ್ಟಕ್ಕೆ ರಾಜ್ಯದ ನಾನಾ ಭಾಗಗಳಿಂದ ಆಗಮಿಸಿದ್ದರು. ಮುಂಜಾನೆ 3.30ಕ್ಕೆ ಪೂಜಾ ಕೈಂಕರ್ಯಗಳು ಆರಂಭವಾದವು. ಮಹಾ ರುದ್ರಾಭಿಷೇಕ, ಪಂಚಾಮೃತ ಅಭಿಷೇಕ ನೆರವೇರಿಸಲಾಯಿತು.ದೇವಸ್ಥಾನದಪ್ರಾಂಗಣವನ್ನು ವಿವಿಧ ಹೂವುಗಳಿಂದ ಅಲಂಕರಿಸಲಾಗಿದೆ. ಭಕ್ತರನ್ನು ನಿಯಂತ್ರಿಸಲು ಪೊಲೀಸರು ಹರಸಾಹಸ ಪಡಬೇಕಾಯಿತು.

### ನೃತ್ಯ ರೂಪಕಕ್ಕೆ ಹೆಚ್ಎಂಸಿ ಪ್ರೊತ್ಸಾಹ

■ **ಶಿವಮೊಗ್ಗ**

ಸಾಣೇಹಳ್ಳಿಯ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳ ಮಾರ್ಗದರ್ಶನದಲ್ಲಿ ಬಸವಣ್ಣನವರ 38 ವಚನಗಳನ್ನು ಆಧರಿಸಿದ ಹಿಂದಿ ಭಾಷೆಯ ನೃತ್ಯ ರೂಪಕ ತುಮಾರೆ ಸಿವಾ ಔರ್ ಕೋಯಿ ನಹಿ – ನೀನಲ್ಲದೆ ಮತ್ತಾರೂ ಇಲ್ಲವಯ್ಯ ವನ್ನು ದೇಶದ ವಿವಿಧೆಡೆ ವಚನ ಸಾಂಸ್ಕೃತಿಕ ಅಭಿಯಾನವಾಗಿ ಹಮ್ಮಿಕೊಂಡಿದೆ. ಈ ವಿಶೇಷ ಕಾರ್ಯಕ್ರಮಕ್ಕೆ ಪ್ರೊತ್ಸಾಹಿಸುವ ಹಿನ್ನೆಲೆಯಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾದ ರಾಜ್ಯ ಉಪಾಧ್ಯಕ್ಷ ಹೆಚ್.ಎಂ. ಚಂದ್ರಶೇಖರಪ್ಪ ಅವರು ಬೆಂಗಳೂರಿನ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದ ಸಂದರ್ಭದಲ್ಲಿ ಶ್ರೀಗಳ ಮೂಲಕ ದೇಣಿಗೆ ನೀಡಿದ್ದಾರೆ. ಬಸವಣ್ಣನವರ 38 ವಚನಗಳನ್ನು ಹಿಂದಿಗೆ ಅನುವಾದಿಸಿ ತರಬೇತಿ ಪಡೆದ 24 ನೃತ್ಯ ಕಲಾವಿದೆಯರು 2023ರ ಜು.2 ರಿಂದ ಸೆ. 2ರವರೆಗೆ ಭಾರತದ 14 ರಾಜ್ಯಗಳಲ್ಲಿ 60ಕ್ಕೂ ಹೆಚ್ಚು ಪ್ರದರ್ಶನ ನೀಡಲಿದ್ದಾರೆ.

### ಮೂತ್ರಕೋಶ ತಪಾಸಣಾ ಶಿಬಿರ

■ **ಹೊಸಪೇಟೆ**

ಹೊಸಪೇಟೆ ಕಿಡ್ನಿಕೇರ್ ಕ್ಲಿನಿಕ್ ಹೊಸಪೇಟೆ ಹಾಗೂ ಅಕ್ಷೋಹಿಣಿ ಸರ್ವಜಿತ್ ಆಸ್ಪತ್ರೆ ಮತ್ತು ವಿಜಯ ಕ್ಲಿನಿಕ್ ಮರಿಯಮ್ಮನಹಳ್ಳಿ ಇವರ ಸಂಯುಕ್ತಾಶ್ರಯದಲ್ಲಿ ಮರಿಯಮ್ಮನಹಳ್ಳಿಯಲ್ಲಿ ಉಚಿತ ಮೂತ್ರಕೋಶ ತಪಾಸಣಾ ಶಿಬಿರವನ್ನು ಗುರುವಾರ ಹಮ್ಮಿಕೊಳ್ಳಲಾಗಿದೆ. ಮರಿಯಮ್ಮನಹಳ್ಳಿಯ ಅಕ್ಷೋಹಿಣಿ ಸರ್ವಜಿತ್ ಆಸ್ಪತ್ರೆಯಲ್ಲಿ ಬೆಳಗ್ಗೆ 11 ರಿಂದ 2 ಗಂಟೆ ವರೆಗೆ ಮೂತ್ರಕೋಶಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಪರೀಕ್ಷಿಸಿ ಉಚಿತ ಔಷಧಿಗಳನ್ನು ನೀಡಲಾಗುತ್ತಿದೆ. ಶಿಬಿರದಲ್ಲಿ ಮೂತ್ರರೋಗ ತಜ್ಞರಾದ ಡಾ.ನಾಗರಾಜ್ ಹೆಚ್ ಹಾಗೂ ಕುಟುಂಬ ವೈದ್ಯರಾದ ಡಾ. ವಿಜಯ ವೆಂಕಟೇಶ್, ಡಾ. ಸೋಮೇಶ್ವರ ಜಿ ಎಂ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಲಾಗಿದೆ.

### ಅತಿಥಿ ಉಪನ್ಯಾಕಸರ ಹುದ್ದೆಗೆ ಅರ್ಜಿ ಆಹ್ವಾನ

■ **ಕೊಪ್ಪಳ**

ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ಅಧಿನದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರೇಸಿಂದೋಗಿಯ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ವಿಜ್ಞಾನ ಕಾಲೇಜಿನಲ್ಲಿ 2023-24ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರುವ ಆಂಗ್ಲಭಾಷಾ ವಿಷಯದ ಬೋಧನೆಗೆ ಅತಿಥಿ ಉಪನ್ಯಾಸಕರ ಹುದ್ದೆಗೆ ಆಸಕ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಈ ಹುದ್ದೆಗೆ ಎಂಎ ಬಿಎಡ್ ವಿದ್ಯಾರ್ಹತೆ ಹೊಂದಿರಬೇಕು. ಉಪನ್ಯಾಸಕರನ್ನು ಮಾದರಿ ಪಾಠ ಬೋಧನೆ ಆಧಾರದ ಮೇಲೆ ವಿದ್ಯಾರ್ಥಿಗಳು ಹಾಕುವ ಮತಗಳಿಂದ ಆಯ್ಕೆ ಮಾಡಲಾಗುವುದು. ಈ ಹುದ್ದೆಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು ರವರು ನಿಗದಿಪಡಿಸಿರುವ ವೇತನ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹಿರೇಸಿಂದೋಗಿ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ವಿಜ್ಞಾನ ಕಾಲೇಜು ಪ್ರಾಂಶುಪಾಲರಾದ ಶರಣಗೌಡ ಮೊ.ಸಂ: 7411999371, ದ್ವಿ.ದ.ಸ ಪರಶುರಾಮ ಬಿ ಮೊ.ಸಂ: 9019531301ಗೆ ಸಂಪರ್ಕಿಸಬಹುದಾಗಿದೆ.

# ಸರ್ಕಾರಿ ನೌಕರರ ಮೇಲೆ ಹಲ್ಲೆ: ಖಂಡನೆ

» **ಚಿತ್ರದುರ್ಗ**

ಸರ್ಕಾರಿ ನೌಕರರ ಮೇಲೆ ಹಲ್ಲೆ ಮಾಡಿರುವವರನ್ನು ಬಂಧಿಸಿ ಕಠಿಣ ಶಿಕ್ಷೆಯನ್ನು ನೀಡುವಂತೆ ಆಗ್ರಹಿಸಿ ಸರ್ಕಾರಿ ನೌಕರರ ಸಂಘ ಮತ್ತು ಗುತ್ತಿಗೆದಾರರ ಸಂಘದ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ರಕ್ಷಣಾಧಿಕಾರಿಗಳಗೆ ಮನವಿ ಸಲ್ಲಿಸಿತು.

ಪಿ.ಎಂ.ಜಿ.ಎಸ್.ವೈ. ಸಬ್-ಡಿವಿಷನ್‌ನ ಸಹಾಯಕ ಇಂಜಿನಿಯರ್ ಜಿ.ಎಂ. ನಾಗರಾಜುರವರು ಕಸವನಹಳ್ಳಿ ರಸ್ತೆ ಕಾಮಗಾರಿ ವೀಕ್ಷಣೆಯ ನಿಮಿತ್ತ ಕರ್ತವ್ಯ ನಿರತರಾಗಿದ್ದ ಸಂಧರ್ಭದಲ್ಲಿ ಸರಿ ಸುಮಾರು 10 ಗಂಟೆಗೆ ಕಸವನಹಳ್ಳಿ ಗ್ರಾಮದ ವೀರಕರಿಯಪ್ಪ ಮತ್ತು ಇವರ 07 ಜನ ಸಹಚರರು ಏಕಾಏಕಿ ನಾಗರಾಜು ಇಂಜಿನಿಯವರ ಹತ್ತಿರ ಬಂದು ಕಾಮಗಾರಿಗೆ ಸಂಬಂಧಿಸಿದಂತೆ ವಿಚಾರಿಸಿ, ನಾಗರಾಜುರವರ ಪ್ರತಿಕ್ರಿಯನ್ನೂ ಸಹ ಸಮಾಧಾನದಿಂದ ಕೇಳಿಸಿಕೊಳ್ಳದೆ ಅವಾಚ್ಯ ಶಬ್ದಗಳಿಂದ ನಿಂದಿಸಿ, ವೀರಕರಿಯಪ್ಪ ಮತ್ತು ಇವರ 07 ಜನ ಸಹಚರರು ನಾಗರಾಜುರವರ ತಲೆಗೆ ಕಲ್ಲುನಿಂದ ಬಲವಾಗಿ ಹೊಡೆದು ಮಾರಣಾಂತಿಕ ಹಲ್ಲೆ ನಡೆಸಿರುತ್ತಾರೆ. ಇದರಿಂದ ತುಂಬಾ ರಕ್ತಸ್ರಾವವಾಗಿ ನಿತ್ರಾಣಗೊಂಡ ನಾಗರಾಜುರವರನ್ನು ಸರ್ಕಾರಿ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಪಡೆಯುತ್ತಿದ್ದಾರೆ.



ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸದರಿ ಹಲ್ಲೆಯನ್ನು ತೀರ್ವವಾಗಿ ಖಂಡಿಸಿ ಈ ಕೂಡಲೇ ಸಂಬಂದಿಸಿದವರನ್ನು ಬಂಧಿಸಲು ಮನವಿ ಮಾಡಲಾಗಿತ್ತು ಪೊಲೀಸ್ ವರಿಷ್ಠಾಧಿಕಾರಿಗಳು ಸಂಘದ ಮನವಿಗೆ ಸ್ಪಂದಿಸಿ ಪ್ರಕರಣವನ್ನು ದಾಖಲಿಸಿ ಆರೋಪಿಯನ್ನು ಬಂಧಿಸಲು ಸಂಬಂಧಿಸಿದ ಠಾಣೆಯ ಅಧಿಕಾರಿಗಳಿಗೆ ತಿಳಿಸಿದ್ದು ಸಂಘವು ಅಭಿನಂದಿಸುತ್ತದೆ. ಅದೇ ದಿನ ಎಫ್ಐಆರ್ ದಾಖಲಾಗಿದ್ದು ಆರೋಪಿಗಳನ್ನು ಇದುವರೆವಿಗೂ ಬಂಧಿಸಿರುವುದಿಲ್ಲ.

ಜಿಲ್ಲಾ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಗುತ್ತಿಗೆದಾರರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸಂಬಂಧಿಸಿದ ಎಲ್ಲಾ ಇಲಾಖೆಯ ಅಧಿಕಾರಿಗಳ ಜೊತೆಗೆ ಜಿಲ್ಲಾಧಿಕಾರಿಗಳು ಮತ್ತು ವರಿಷ್ಠಾಧಿಕಾರಿಗಳನ್ನು ಸಂಪರ್ಕಿಸಿ ನೌಕರರು ತಪ್ಪು ಮಾಡಿದ್ದಾಗ ಮೇಲಾಧಿಕಾರಿಗಳಿಗೆ ದೂರು ನೀಡುವುದು ಅಥವಾ ಲೋಕಯುಕ್ತರಿಗೆ ಮನವಿ ಸಲ್ಲಿಸುವುದು ಮಾಡಲಿ ಅದನ್ನು ಬಿಟ್ಟು ಏಕಾಏಕಿ ದೈಹಿಕವಾಗಿ ದಂಡನೆ ಮಾಡುವುದು ಕಾನೂನಿನ ಚೌಕಟ್ಟಿನಲ್ಲಿ ಇರುವುದಿಲ್ಲ ಇದು ಅಕ್ಷಮ್ಯ ಅಪರಾಧ ನೌಕರರಿಗೂ ಮಾನವೀಯತೆ ಇರುತ್ತದೆ ನಮ್ಮನ್ನೆ ನಂಬಿಕೊಂದಿರುವ ಕುಟುಂಬ ಇರುವುದನ್ನು ಸಾರ್ವಜನಿಕರು ಮರೆಯಬಾರದು ಸರ್ಕಾರಿ ಸೇವೆಗೆ ಅಡಿಪಡಿಸಿದಂತಹ ಕಿಡಿಗೇಡಿಗಳಿಗೆ ಇದರ ಮೂಲಕ ತಕ್ಕ ಶಾಸ್ತಿಯಾಗಬೇಕು. ಸರ್ಕಾರ ಕಠಿಣ ಕ್ರಮ ಕೈಗೊಂಡು ಕಾನೂನುಗಳನ್ನು ರೂಪಿಸಿ ನೌಕರರನ್ನು ರಕ್ಷಣೆಮಾಡಬೇಕು ಎಂದು ಅಧಿಕಾರಿಗಳ ಗಮನಕ್ಕೆ ತಂದು ಈ ಕೂಡಲೇ ಆರೋಪಿಗಳನ್ನು ಬಂಧಿಸಿ ನೌಕರರಿಗೆ ನ್ಯಾಯ ನೀಡಲು ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ತಿಮ್ಮಾರೆಡ್ಡಿ, ಗುತ್ತಿಗೆದಾರರ ಸಂಘದ ಅಧ್ಯಕ್ಷ ಜಿಲ್ಲಾ ಮಂಜುನಾಥ್, ತಾಲ್ಲೂಕು ಅಧ್ಯಕ್ಷ ಮಲ್ಲೇಶಪ್ಪ, ಜಿಲ್ಲಾ ಕಾರ್ಯದರ್ಶಿ ಮಂಜುನಾಥ್ ಎಸ್,ಕೆ. ಪಿ.ಎಂ.ಜಿ.ಎಸ್.ವೈ.ನ ಶ್ರೀಧರ್, ಹಿರಿಯ ಉಪಾಧ್ಯಕ್ಷ ಶ್ರೀಮತಿ ಸುಧಾ, ಚಕ್ರವರ್ತಿ, ಶ್ರೀನಿವಾಸ್, ಪಾತಪ್ಪ, ಶಂಕುತಲ ಭಾಯಿ , ಪುಷ್ಪವತಿ ಸೇರಿದಂತೆ ವಿವಿಧ ಇಲಾಖೆಯ ಸರ್ಕಾರಿ ಅಧಿಕಾರಿಗಳು ನೌಕರರು ಭಾಗವಹಿಸಿದ್ದರು

### ಸರ್ಕಾರಿ ನೌಕರರ ಹಲ್ಲೆ ಖಂಡನೀಯ: ನಿಕಟ ಪೂರ್ವ ಅಧ್ಯಕ್ಷ ಕೆ.ಮಂಜುನಾಥ್

» **ಚಿತ್ರದುರ್ಗ**

ಪಿ.ಎಂ.ಜಿ.ಎಸ್.ವೈ ಯೋಜನಾ ಉಪ ವಿಭಾಗ ಚಿತ್ರದುರ್ಗದ ಸಹಾಯಕ ಇಂಜಿನಿಯರ್ ನಾಗರಾಜ್.ಜಿ.ಎಂ ಇವರ ಮೇಲೆ ನಡೆದಿರುವ ಹಲ್ಲೆಯ ಅತ್ಯಂತ ಖಂಡನೀಯ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಚಿತ್ರದುರ್ಗ ನಿಕಟ ಪೂರ್ವ ಅಧ್ಯಕ್ಷ ಮಂಜುನಾಥ್ ಕೆ ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ಸರ್ಕಾರಿ ನೌಕರರು ತಪ್ಪು ಮಾಡಿದಾಗ ಮೇಲಾಧಿಕಾರಿಗಳಿಗೆ ದೂರು ನೀಡುವುದು ಅಥವಾ ಲೋಕಾಯುಕ್ತರಿಗೆ ದೂರು ನೀಡುವುದು ಮಾಡಲಿ ಅದನ್ನು ಹೊರತುಪಡಿಸಿ ದೈಹಿಕವಾಗಿ ದಂಡನೆ ಮಾಡುವುದು ಅಪರಾಧವಾಗಿರುತ್ತದೆ ಎಂದರು.

# ನಗರಸಭೆ ಪೌರಾಯುಕ್ತರಾಗಿ 3ನೇ ಬಾರಿಗೆ ಕೆ.ಲೀಲಾವತಿ ಅಧಿಕಾರ ಪದಗ್ರಹಣ

» **ಚಳ್ಳಕೆರೆ**

ಇಲ್ಲಿನ ನಗರಸಭೆಯ ಪೌರಾಯುಕ್ತರಾಗಿ ಕೆ.ಲೀಲಾವತಿ ಮೂರನೇ ಭಾರಿಗೆ ನಿರ್ಗಮನ ಪೌರಾಯುಕ್ತ ರಾಮಕೃಷ್ಣ ಎಫ್ ಸಿದ್ದನಕೊಳ್ಳರವರಿಂದ ಅಧಿಕಾರ ಸ್ವೀಕರಿಸಿದರು.


ಕೆ.ಲೀಲಾವತಿ ಈ ಹಿಂದೆ ಎರಡು ಬಾರಿ ನಗರಸಭೆಯ ಪೌರಾಯುಕ್ತರಾಗಿ ಕಾರ್ಯನಿರ್ವಹಿಸಿ ನಂತರ ನಾಯಕನಹಟ್ಟಿ ಪಟ್ಟಣ ಪಂಚಾಯಿತಿಗೆ ವರ್ಗಾವಣೆಗೊಂಡು ನಂತರ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ತುಮಕೂರು ಜಿಲ್ಲೆ ಕೊರಟಗೆರೆಗೆ ವರ್ಗಾವಣೆಗೊಂಡಿದ್ದರು. ಚುನಾವಣೆ ನಂತರ ಮರಳಿ ಚಳ್ಳಕೆರೆಯ ನಗರಸಭೆಯ ಪೌರಾಯುಕ್ತರಾಗಿ ಗುರುವಾರ ಅಧಿಕಾರ ಸ್ವೀಕರಿಸಿದರು.

ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಇಲ್ಲಿನ ನಗರಸಭೆಯ ಪೌರಾಯುಕ್ತರಾಗಿ ಕರ್ತವ್ಯ ನಿರ್ವಹಿಸಲು ನನಗೆ ತುಂಬಾ ಸಂತೋಷವೆನ್ನಿಸುತ್ತದೆ.ಕಳೆದ ಎರಡು ಭಾರಿಯೂ ಸಹ ಸಮಯವಾಕಾಶ ಕಡಿಮೆ ಇದ್ದುದ್ದರಿಂದ ಹೆಚ್ಚು ಪ್ರಗತಿ ಸಾಧಿಸಲು ಸಾಧ್ಯವಾಗಲಿಲ್ಲ. ಈ ನಗರಸಭೆಯ ಪೌರಾಯುಕ್ತರಾಗಿ ಮೂರು ಬಾರಿ ದಿವಂಗತ ಜೆ.ಟಿ.ಹನುಮಂತರಾಜು,ಪಿ.ಪಾಲಯ್ಯ ಈಗಾಗಲೇ ಕಾರ್ಯನಿರ್ವಹಿಸಿದ್ದು, ಮತ್ತೆ ನನಗೆ ಸರ್ಕಾರ ಅವಕಾಶ ಮಾಡಿಕೊಟ್ಟಿದೆ.



ಪೌರಾಡಳಿತ ಇಲಾಖೆ ನಿರ್ದೇಶಕರು, ಜಿಲ್ಲಾಧಿಕಾರಿಗಳು,ಜಿಲ್ಲಾಯೋಜನಾಧಿಕಾರಿಗಳು, ಕ್ಷೇತ್ರದ ಶಾಸಕ ಟಿ.ರಘುಮೂರ್ತಿಯವರ ಮಾರ್ಗದರ್ಶನದಲ್ಲಿ ನಗರಸಭೆಯ ಸಂಪೂರ್ಣ ಆಡಳಿತವನ್ನು ಪಾರದರ್ಶಕವಾಗಿ ನಡೆಸಲಾಗುವುದು. ನಗರಸಭೆಯಲ್ಲಿ ಇ-ಸ್ವತ್ತು ನೀಡುವ ಬಗ್ಗೆ ವಿಳಂಬವಾಗುತ್ತಿರುವ ಬಗ್ಗೆ ಸಾರ್ವಜನಿಕರ ಆಕ್ಷೇಪಣೆ ಹಿನ್ನೆಲೆಯಲ್ಲಿ ಶಾಸಕರು ಮೌಖಿಕ ನಿರ್ದೇಶನ ನೀಡಿದ್ದು, ಮಧ್ಯವರ್ತಿಗಳ ಹಾವಳಿಯನ್ನು ನಿಯಂತ್ರಿಸಿ ಸಕಾಲದಲ್ಲಿ ಇ-ಸ್ವತ್ತು ವಿತರಣೆಗೆ ಕ್ರಮ ವಹಿಸಲಾಗುವುದು. ಈಗಾಗಲೇ ಸಿಬ್ಬಂದಿಗಳ ಸಭೆ ಕರೆದು ಯಾವುದೇ ಸಾರ್ವಜನಿಕ ಕೆಲಸಗಳು ವಿಳಂಬವಾಗದಂತೆ ಜಾಗ್ರತೆ ವಹಿಸಬೇಕು ಎಂದು ಸೂಚಿಸಲಾಗಿದೆ ಎಂದರು. ವ್ಯವಸ್ಥಾಪಕ ಲಿಂಗರಾಜು, ಎಇಇ ವಿನಯ್, ನೈರ್ಮಲ್ಯ ಇಂಜಿನಿಯರ್ ನರೇಂದ್ರಬಾಬು, ಸಹಾಯಕ ಇಂಜಿನಿಯರ್ ಲೋಕೇಶ್, ಕಂದಾಯಾಧಿಕಾರಿ ರುಕ್ಮಿಣಿ, ಹಿರಿಯ ಆರೋಗ್ಯ ನಿರೀಕ್ಷಕ ಮಹಲಿಂಗಪ್ಪ, ದಾದಾಪೀರ್, ಗಣೇಶ್, ಗೀತಾಕುಮಾರಿ, ತಿಪ್ಪೇಸ್ವಾಮಿ, ಎಸ್.ಎಲ್.ಮಂಜಣ್ಣ, ಓಬಳೇಶ್, ವಿಶ್ವನಾಥ, ತಿಪ್ಪೇಸ್ವಾಮಿ, ನಾಗರಾಜು, ಭದ್ರಿ, ಭಾಗ್ಯಮ್ಮ ಮುಂತಾದವರು ಪೌರಾಯುಕ್ತರನ್ನು ಪುಷ್ಪಹಾರ, ಶಾಲು ಹೊದಿಸಿ ಸನ್ಮಾನಿಸಿ ಸ್ವಾಗತಿಸಿದರು.

## ವಾಲ್ಮೀಕಿ ರಾಮಾಯಣ ಪ್ರತಿಯೊಬ್ಬ ಬದುಕಿಗೆ ಜ್ಞಾನದ ಬೆಳಕು: ಬಿ.ತಿಪ್ಪಣ್ಣ



» **ಚಳ್ಳಕೆರೆ**

ಮಹರ್ಷಿ ವಾಲ್ಮೀಕಿಯವರು ರಚಿಸಿದರಾಮಾಯಣ ಮಾನವನ ಜೀವನದ ಮೌಲ್ಯಗಳಿಗೆ ವಿಶೇಷ ಬೆಳಕನ್ನು ನೀಡಲು ಸಫಲವಾಗಿದೆ. ರಾಮಾಯಣದ ಕಥೆಗಳು ಎಲ್ಲಾ ವರ್ಗದ ಜನರ ಗಮನ ಸೆಳೆಯಲು ಯಶಸ್ವಿಯಾಗಿದೆ. ಇದೊಂದು ಅತ್ಯಮೂಲ್ಯ ಕೃತಿ ಎಂಬುವುದರಲ್ಲಿ ಸಂದೇಹವಿಲ್ಲ. ರಾಮಾಯಣದ ಮೌಲ್ಯಗಳನ್ನು ಸಂರಕ್ಷಣೆ ಮಾಡುವಲ್ಲಿ ನಾವೆಲ್ಲರೂ ಸಫಲರಾಗಬೇಕು ಎಂದು ಖ್ಯಾತ ಸಾಹಿತಿ, ಚಿಂತಕ ಬಿ.ತಿಪ್ಪಣ್ಣ ಮರಿಕುಂಟೆ ತಿಳಿಸಿದರು.

ಅವರು, ಗ್ರಾಮದ ವಾಲ್ಮೀಕಿ ಭವನದಲ್ಲಿ ಗ್ರಾಮೀಣ ಸಾಹಿತ್ಯ ಪರಿಷತ್ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ರಾಮಾಯಣದ ಬಗ್ಗೆ ಇಂದಿಗೂ ಸಹ ಜನರಲ್ಲಿ ವಿಶೇಷವಾದ ಗೌರವಿದೆ. ಪ್ರತಿಯೊಬ್ಬರ ಬದುಕಿಗೆ ಹೊಸ ಚೈತನ್ಯ ತುಂಬಲು ರಾಮಾಯಣ ಕೃತಿ ಸಹಕಾರಿಯಾಗಿದೆ. ಗ್ರಾಮೀಣ ಭಾಗದ ಜನರಿಗೆ ಇಂದಿಗೂ ರಾಮಾಯಣ ಆದರ್ಶಪ್ರಾಯ ಎಂದರು.

ಇದೇ ಸಂದರ್ಭದಲ್ಲಿ ಕಳೆದ ಹಲವಾರು ವರ್ಷಗಳಿಂದ ಕೃಷಿ ಚಟುವಟಿಕೆಯಲ್ಲಿ ರಾಜ್ಯ, ಅಂತರಾಜ್ಯ ಪ್ರಶಸ್ತಿ ಪಡೆದ ಪ್ರಗತಿಪರ ರೈತ ಡಾ.ಆರ್. ದಯಾನಂದಮೂರ್ತಿ ಸನ್ಮಾನಿಸಲಾಯಿತು. ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಅವರು, ನನ್ನ ಕೃಷಿ ಚಟುವಟಿಕೆಗಳಿಗೆ ರೈತರು, ಸಾರ್ವಜನಿಕರು ನೀಡುತ್ತಿರುವ ಸಹಕಾರಕ್ಕೆ ಕೃತಜ್ಞತೆ ಸಲ್ಲಿಸುವೆ. ಹಳ್ಳಿಗರ ಜನಜೀವನ ಸುಧಾರಣೆ ಆಗಬೇಕಿದೆ. ಶಿಕ್ಷಣ ಜಾಗೃತಿಯಲ್ಲಿ ಬದುಕಿನ ಭದ್ರತೆ ಕಂಡುಕೊಳ್ಳಬೇಕು.ಸಮಾಜವನ್ನು ಪರಿಪೂರ್ಣ ಅರ್ಥೈಸಿಕೊಳ್ಳಲು ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಯ ಚಟುವಟಿಕೆಗಳಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಶಿಕ್ಷಕ ಕೋಡಪ್ಪ ಬಿ.ಜಿ. ವೆಂಕಟೇಶ್, ನಿವೃತ್ತ ನೌಕರ ಎಂ.ಒ. ಓಬಣ್ಣ, ಪೂಜಾರಿ ಗೋವಿಂದಪ್ಪ, ವಿನೋದಮ್ಮ, ಎ.ವಿ. ಮಹೇಶ, ಮಂಜುನಾಥ, ಹನುಮಂತಪ್ಪ ಮುಂತಾದವರು ಕಾ ಂ ು ್ ರ್ ಕ್ ್ರ ವ್ ು ದ್ ಲ್ಲಿ ಭಾಗವಹಿಸಿದ್ದರು.

## ಆರೆಸ್ಸೆಸ್‌ಗೆ ನೀಡಿದ 35 ಎಕರೆ 33 ಗುಂಟೆ ಜಮೀನು ತಡೆ ಹಿಡಿದ ಸರ್ಕಾರ

» ಮೊದಲ ಪುಟದಿಂದ

ಜನಸೇವಾ ಟ್ರಸ್ಟ್‌ನ ಕಾರ್ಯದರ್ಶಿ ನಿರ್ಮಲ್ ಕುಮಾರ್ ಅವರನ್ನು ಈ ಬಗ್ಗೆ ಪ್ರಶ್ನಿಸಿದಾಗ, 'ಈ ಬಗ್ಗೆ ಟ್ರಸ್ಟ್‌ಗೆ ಸರ್ಕಾರದಿಂದ ಯಾವುದೇ ಮಾಹಿತಿ ಬಂದಿಲ್ಲ' ಎಂದರು. ಬಿಜೆಪಿ ಅಧಿಕಾರದ ಅವಧಿಯಲ್ಲಿ (2019-2022) ವಿವಿಧ ಸಂಘಸಂಸ್ಥೆಗಳಿಗೆ ಒಂಬತ್ತು ಜಿಲ್ಲೆಗಳಲ್ಲಿ ಒಟ್ಟು 252 ಎಕರೆ 36 ಗುಂಟೆ ಗೋಮಾಳ ಭೂಮಿಯನ್ನು ಮಂಜೂರು ಮಾಡಿತ್ತು. ಅದರಲ್ಲಿ ಆದಿಚುಂಚುನಗಿರಿ ಮಠ, ಸಿದ್ದಗಂಗಾ ಮಠ, ಇಸ್ಕಾನ್, ರಾಷ್ಟ್ರೋತ್ಥಾನ ಪರಿಷತ್, ಕರ್ನಾಟಕ ಲಾನ್ ಟೆನಿಸ್ ಅಸೋಸಿಯೇಷನ್, ಒಕ್ಕಲಿಗರ ಸಂಘ ಮತ್ತು ಇತರರಿಗೆ ಮಂಜೂರಾದ ಗೋಮಾಳ ಭೂಮಿ ಸೇರಿದೆ.ಗೋಮಾಳ ಜಮೀನು ಹಂಚಿಕೆಗೆ ಮಹಾಲೇಖಪಾಲರು (ಸಿಎಜಿ) 2018ರಲ್ಲಿ ಆಕ್ಷೇಪ ವ್ಯಕ್ತಪಡಿಸಿದ್ದರು.ಕರ್ನಾಟಕ ಭೂಕಂದಾಯ ನಿಯಮಗಳ ಪ್ರಕಾರ ಪ್ರತಿ 100 ಜಾನುವಾರುಗಳಿಗೆ 30 ಎಕರೆಯನ್ನು ಗೋಮಾಳಕ್ಕೆ ಮೀಸಲಿಡಬೇಕು. ಜಿಲ್ಲಾಧಿಕಾರಿಗಳ ಪೂರ್ವಾನುಮತಿಯ ಬಳಿಕ ಮಾತ್ರ ಗೋಮಾಳ ಭೂಮಿ ಕಡಿಮೆ ಮಾಡಬಹುದು. ವಿವಿಧ ಹೈಕೋರ್ಟ್‌ಗಳು ಗೋಮಾಳ ಭೂಮಿ ಹಂಚಿಕೆ ಮಾಡದಂತೆ ಸರ್ಕಾರಕ್ಕೆ ಸೂಚಿಸಿರುವುದನ್ನು ಸಿಎಜಿ ಎತ್ತಿ ತೋರಿಸಿತ್ತು. ಆದರೆ, ನಗರ ವ್ಯಾಪ್ತಿಯಲ್ಲಿ ಮತ್ತು ಸುತ್ತಮುತ್ತಲಿನ ಗೋಮಾಳ ಭೂಮಿಯನ್ನು ಮಂಜೂರು ಮಾಡಲು 2008ರ ಜನವರಿಯಲ್ಲಿ ನಿಯಮಗಳನ್ನು ತಿದ್ದುಪಡಿ ಮಾಡಲಾಗಿತ್ತು ಎಂದು ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

### ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ನ್ಯಾಯಾಧೀಶರಾದ ಪ್ರೇಮಾವತಿ ಮನಗೂಳಿ ಮಾಹಿತಿ

# ರಾಷ್ಟ್ರೀಯ ಲೋಕ ಅದಾಲತ್: 2854 ಪ್ರಕರಣಗಳು ಇತ್ಯರ್ಥ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಕಳೆದ ಜುಲೈ 8ರಂದು ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಒಟ್ಟು 2854 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಪ್ರೇಮಾವತಿ ಮನಗೂಳಿ ಎಂ ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲಾ 23 ನ್ಯಾಯಾಲಯಗಳಲ್ಲಿ ದಾಖಲೆಯ ಪ್ರಮಾಣದಲ್ಲಿ ಚಾಲ್ತಿಯಲ್ಲಿದ್ದ ಪ್ರಕರಣಗಳು ರಾಜೀ ಮುಖಾಂತರ ಇತ್ಯರ್ಥ ಆಗಿರುವುದು ಸಂತೋಷದ ಸಂಗತಿ ಮತ್ತು ಮುಂದಿನ ಲೋಕ ಅದಾಲತ್‌ಗೆ ಉತ್ತೇಜನ ನೀಡಿದೆ ಎಂದು ತಿಳಿಸಿದರು. ಲೋಕ ಅದಾಲತ್‌ನಲ್ಲಿ 5525 ಪ್ರಕರಣಗಳನ್ನು ರಾಜೀ ಸಂಧಾನಕ್ಕೆ ಕೈಗೆತ್ತಿಕೊಳ್ಳಲಾಗಿತ್ತು. ಇದರಲ್ಲಿ 2854 ಪ್ರಕರಣಗಳು



ಇತ್ಯರ್ಥಗೊಂಡಿದ್ದು,ಅದರಲ್ಲಿ ವಿಶೇಷವಾಗಿ 74 ಪಾಲು ವಿಭಾಗದ ಪ್ರಕರಣಗಳು, 322 ಚೆಕ್‌ಬೌನ್ಸ್ ಪ್ರಕರಣಗಳು, 122 ಕ್ರಿಮಿನಲ್ ಕಾಂಪೌಂಡ್ ಪ್ರಕರಣಗಳು, 133 ಅಪಘಾತ ವಿಮಾ ಪ್ರಕರಣಗಳು, 73 ಕೌಟುಂಬಿಕ ಪ್ರಕರಣಗಳು, 188 ಅಮಲ್ ಜಾರಿ ಪ್ರಕರಣಗಳು, 322 ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, 24 ಕರಾರಿಗೆ ಸಂಬಂಧಿಸಿದ ದಾವೆಗಳು, 166 ವಿವಿಧ ರೀತಿಯ ಸಿವಿಲ್ ದಾವೆಗಳು, 160 ಕ್ರಿಮಿನಲ್ ಕಾಂಪೌಂಡಬಲ್ ಪ್ರಕರಣಗಳು (ಐಪಿಸಿ ಹೊರತುಪಡಿಸಿ ಬೇರೆ ಕಾಯ್ದೆಗಳಲ್ಲಿ ದಾಖಲಾದ ಪ್ರಕರಣಗಳು), ಇತರೆ ಅಪರಾಧಿಕ ಕಾಯ್ದೆಗಳ ಅಡಿಯಲ್ಲಿ ಸಾವಿರಕ್ಕೂ ಹೆಚ್ಚು ಪ್ರಕರಣಗಳು ಇತ್ಯರ್ಥವಾಗಿರುವುದು ಗಮನಾರ್ಹ ಸಂಗತಿಯಾಗಿದೆ ಎಂದರು. ಲೋಕ ಅದಾಲತ್‌ನಲ್ಲಿ ವಿಶೇಷವಾಗಿ ಚಿತ್ರದುರ್ಗದ ಪ್ರಧಾನ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ 29 ವರ್ಷಗಳ ಹಳೆಯದಾದ ವ್ಯಾಜ್ಯವನ್ನು ಪಕ್ಷಗಾರರು ರಾಜೀ ಮಾಡಿಕೊಂಡಿದ್ದು, ವಿವಾದಕ್ಕೆ ತಾರ್ಕಿಕ ಅಂತ್ಯ ಸಿಕ್ಕಿದೆ. ಹಿರಿಯೂರಿನ ಹಿರಿಯ ಸಿವಿಲ್ ನ್ಯಾಯಾಲಯದಲ್ಲಿ ಮೂಲ ದಾವೆಯಲ್ಲಿ ರೂ.5,06,92,092/- ಮೊತ್ತದ (ಐದು ಕೋಟಿ ಆರು ಲಕ್ಷ ತೊಂಭತ್ತೆರಡು ಸಾವಿರದ ತೊಂಭತ್ತೆರಡು ರೂಪಾಯಿಗಳು) ಪರಿಹಾರದ ಹಣವನ್ನು ರಾಜೀ ಮೂಲಕ ಇತ್ಯರ್ಥಪಡಿಸಿರುವುದು ವಿಶೇಷವಾಗಿದೆ. ಈ ಪ್ರಕರಣವು ಒಂದೇ ಕುಟುಂಬದ ಸದಸ್ಯರ ನಡುವಿನ ವ್ಯಾಜ್ಯದಿಂದಾಗಿ ಭೂಸ್ವಾಧೀನದ ಪರಿಹಾರದ ಹಣವನ್ನು ಕೋರ್ಟ್‌ನಲ್ಲಿ ಡಿಫಾಸಿಟ್ ಮಾಡಲಾಗಿತ್ತು. ಇದೀಗ ಕುಟುಂಬದ ಸದಸ್ಯರೆಲ್ಲರೂ ಲೋಕ ಅದಾಲತ್‌ನಲ್ಲಿ ರಾಜೀ ಮಾಡಿಕೊಂಡು ಪ್ರಕರಣ ಇತ್ಯರ್ಥ ಪಡಿಸಲಾಗಿದೆ. ಅಲ್ಲದೇ ಹೊಸದುರ್ಗದ ಹಿರಿಯ ಸಿವಿಲ್ ನ್ಯಾಯಾಲಯದಲ್ಲಿ 13 ವರ್ಷಗಳಿಂದ ದೂರವಿದ್ದ ದಂಪತಿಗಳ ರಾಜೀ ಮಾಡಿ ಒಂದಾಗಿ ಹೋಗಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು. ಲೋಕ ಅದಾಲತ್‌ಗೆ ಸಹಕರಿಸಿದ ವಕೀಲರು, ವಿಮಾ ಕಂಪನಿಗಳು, ಪೊಲೀಸ್ ಇಲಾಖೆ, ಕೆಪಿಟಿಸಿಎಲ್, ಫೈನಾನ್ಸ್ ಕಂಪನಿಗಳು, ಪಕ್ಷಗಾರರು, ನಗರಸಭೆ ಮತ್ತು ಇತರೆ ಇಲಾಖೆಗಳಿಗೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ಧನ್ಯವಾದ ಸಲ್ಲಿಸಿದ ಅವರು, ಮುಂಬರುವ ಸೆಪ್ಟೆಂಬರ್ 9ಕ್ಕೆ ರಾಷ್ಟ್ರೀಯ ಲೋಕ ಅದಾಲತ್ ನಿಗಧಿಯಾಗಿದ್ದು, ಇನ್ನೂ ಹೆಚ್ಚಿನ ಪ್ರಕರಣಗಳನ್ನು ರಾಜೀ ಮೂಲಕ ಬಗೆಹರಿಸಿಕೊಳ್ಳಲು ಸಾರ್ವಜನಿಕರಲ್ಲಿ ವಿನಂತಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಇದ್ದರು.

## ಫಾಸ್ಟ್ ನ್ಯೂಸ್

### ಆಕ್ರಮ ಮನೆಗಳ ಸಕ್ರಮಕ್ಕೆ ಚಿಂತನೆ: ಸಚಿವ ಸುರೇಶ್

» ಬೆಂಗಳೂರು

ರಾಜ್ಯದ ವಿವಿಧ ನಗರಸಭಾ, ಪುರಸಭಾ ವ್ಯಾಪ್ತಿಗಳಲ್ಲಿರುವ ಅನಧಿಕೃತ ಬಡಾವಣೆಗಳ ಮನೆಗಳು ಹಾಗೂ ನಿವೇಶನಗಳಿಗೆ ಒಂದು ಬಾರಿ ಡಿ ಖಾತೆಯನ್ನುನೀಡಿಎಲ್ಲವನ್ನುಸಕ್ರಮಗೊಳಿಸುವಬಗ್ಗೆ ಸರ್ಕಾರ ಚಿಂತನೆ ನಡೆಸಿದೆ ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ವಿಧಾನಸಭೆಯಲ್ಲಿಂದು ಹೇಳಿದರು.ಪ್ರಶ್ನೋತ್ತರ ಅವಧಿಯಲ್ಲಿ ಜೆಡಿಎಸ್‌ನ ಹರೀಶ್‌ಗೌಡ ಅವರ ಪ್ರಶ್ನೆಗೆ ಪೌರಾಡಳಿತ ಸಚಿವ ರಹೀಂಖಾನ್ ಉತ್ತರ ನೀಡುತ್ತಿದ್ದ ಸಂದರ್ಭದಲ್ಲಿ ಮಧ್ಯ ಪ್ರವೇಶಿಸಿ ಮಾತನಾಡಿದ ಸಚಿವ ಬೈರತಿ ಸುರೇಶ್, ನಗರ ಯೋಜನಾ ಇಲಾಖೆಯಿಂದ ಅನುಮೋದನೆಯಾಗದ ಬಡಾವಣೆಗಳಿಗೆ ಹಾಗೂ ಭೂಪರಿವರ್ತನೆಯಾಗದ ನಿವೇಶನಗಳು ಹಾಗೂ ಮನೆ ಕಟ್ಟಿಕೊಂಡಿರುವವರಿಗೆ ಡಿ ಖಾತಾ ನೀಡಿ ಆ ಮೂಲಕ ತೆರಿಗೆ ಸಂಗ್ರಹಿಸುವ ಚಿಂತನೆ ಇದೆ. ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೂ ಮಾತನಾಡಿದ್ದೇನೆ. ಒಂದು ಬಾರಿ ಇವರಿಗೆಲ್ಲಾ ಬಿ ಖಾತೆ ನೀಡುವುದರಿಂದ ಸರ್ಕಾರಕ್ಕೂ ಸುಮಾರು 2 ಸಾವಿರಕೋಟಿರೂ.ಆದಾಯಬರುತ್ತದೆ.ಹಾಗೆಯೇ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.ಭೂ ಪರಿವರ್ತನೆಯಾಗಿರುವ ನಿವೇಶನಗಳಿಗೆ ಎ ಖಾತೆ ನೀಡುತ್ತಿದ್ದೇವೆ. ಇಂತಹ ಮನೆ, ನಿವೇಶನಗಳಿಗೆ ಬಿ ಖಾತಾ ನೀಡಿ ಆ ಮೂಲಕ ಅವರಿಗೆ ಕಟ್ಟಡ ಕಟ್ಟಿಕೊಳ್ಳಲು ಪರವಾನಗಿ ಮತ್ತಿತರ ಸೌಲಭ್ಯಗಳನ್ನು ಪಡೆದುಕೊಳ್ಳಲು ಅನುಕೂಲವಾಗುತ್ತದೆ ಎಂದರು. ಗ್ರಾಮಾಂತರ ಮತ್ತು ನಗರ ಯೋಜನಾ ಪ್ರಾಧಿಕಾರದಿಂದ ಅನುಮೋದನೆಗೊಂಡಿರದ ಈ ಬಡಾವಣೆಗಳಿಗೆ ನಮೂನೆ 3 ನೀಡುತ್ತಿಲ್ಲ. ಇದರಿಂದ ಖಾತೆಗಳು ಆಗುತ್ತಿಲ್ಲ. ಇವರು ಮನೆಗಳನ್ನು ನಿರ್ಮಿಸಲು ಸಾಧ್ಯವಾಗುತ್ತಿಲ್ಲ. ಇದಕ್ಕೆಲ್ಲಾ ಪರಿಹಾರ ದೊರಕಿಸಿಕೊಡಬೇಕು ಎಂದು ಪ್ರಶ್ನೆ ಕೇಳಿದ ಹರೀಶ್‌ಗೌಡ ಸೇರಿದಂತೆ ಕೋನರೆಡ್ಡಿ, ಷಡಕ್ಷರಿ ಅವರು ಸರ್ಕಾರವನ್ನು ಒತ್ತಾಯಿಸಿದ್ದರು. ಇವರುಗಳಿಗೆ ಖಾತೆಗಳನ್ನು ನೀಡದ ಕಾರಣ ಮಾಲೀಕತ್ವವೂ ಸಿಗುತ್ತಿಲ್ಲ. ಇದಕ್ಕೆಲ್ಲಾ ಪರಿಹಾರ ದೊರಕಿಸಿ ಎಂದು ಇವರುಗಳು ಒತ್ತಾಯಿಸಿದ್ದರು.

### ನೇಗಿಲ ಮಿಡಿತ ವಿಶೇಷ ಕಾರ್ಯಕ್ರಮ

» ದಾವಣಗೆರೆ

ಭದ್ರಾವತಿ ಆಕಾಶವಾಣಿ ಕೇಂದ್ರದಿಂದ ಜುಲೈ 17 ರಿಂದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ಶಿವಮೊಗ್ಗ ಇವರ ಸಹಯೋಗದೊಂದಿಗೆ ಹೊಸ ಕಾರ್ಯಕ್ರಮ ಸರಣಿಯು ಪ್ರಸಾರವಾಗಲಿದೆ. ದಾವಣಗೆರೆ, ಶಿವಮೊಗ್ಗ, ಚಿಕ್ಕಮಗಳೂರು ಜಿಲ್ಲಾ ವ್ಯಾಪ್ತಿಯಲ್ಲಿ ಪ್ರತಿದಿನ ಬೆಳಗ್ಗೆ 6.40ಕ್ಕೆ ಯು. ಎ.ಎಚ್.ಎಸ್. ನೇಗಿಲ ಮಿಡಿತ ವಿಶೇಷ ಕಾರ್ಯಕ್ರಮ ಸರಣಿ ನಡೆಯಲಿದೆ. ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಹಾಗೂ ಸಂಶೋಧಕರು ಸಮಗ್ರ ಬೆಳೆ ಪದ್ಧತಿ, ಆಧುನಿಕ ಕೃಷಿ ತಂತ್ರಜ್ಞಾನ, ರೋಗನಿರ್ವಹಣೆ, ಮೌಲ್ಯವರ್ಧನೆ, ಮಾರುಕಟ್ಟೆಯ ಮಾಹಿತಿಯನ್ನು ನೀಡುವ ವಿಶೇಷ ಕಾರ್ಯಕ್ರಮವಾಗಿದೆ.

### ಜಿ-20: ಹಂಪಿಯಲ್ಲಿ ಶೆರ್ಪಾಗಳ 3ನೇ ಸಭೆ

▪ ಜನಾಶಯಪ್ರಭ ಬಳ್ಳಾರಿ

ಭಾರತದ ಜಿ–20ರ ಅಧ್ಯಕ್ಷತೆಯಲ್ಲಿ ಮೂರನೇ ಷರ್ಪಾಗಳ ಸಭೆಯು, ಭಾರತದ ಜಿ–20ರ ಷರ್ಪಾ, ಅಮಿತಾಭ್ ಕಾಂತ್ ಅವರ ಅಧ್ಯಕ್ಷತೆಯಲ್ಲಿ 2023ರ ಜುಲೈ 16 ರವರೆಗೆ ಕರ್ನಾಟಕದ ಹಂಪಿಯಲ್ಲಿ ನಡೆಯಲಿದೆ.ಹಂಪಿ ನಗರವು ತುಂಗಭದ್ರ ನದಿ ದಂಡೆಯಲ್ಲಿದ್ದು, ಇದು ವಿಜಯನಗರ ಸಾಮ್ರಾಜ್ಯದ ಕೊನೆಯ ರಾಜಧಾನಿಯಾಗಿತ್ತು. ಹಂಪಿಯು ಸಂಕೀರ್ಣ ವಿನ್ಯಾಸಗಳು ಮತ್ತು ಇತರ ಸ್ಮಾರಕಗಳೊಂದಿಗೆ ಭವ್ಯವಾದ ದ್ರಾವಿಡ ಶೈಲಿಯ ದೇವಾಲಯಗಳಿಗೆ ಹೆಸರುವಾಸಿಯಾಗಿದೆ. ಇದು ಯುನೆಸ್ಕೋ ವಿಶ್ವ ಪರಂಪರೆಯ ತಾಣವಾಗಿದೆ.ಮೂರು ದಿನಗಳ ಕಾಲ ನಡೆಯಲಿರುವ ಈ 3ನೇ ಷರ್ಪಾ ಸಭೆಯಲ್ಲಿ ಆಯಾ ಷರ್ಪಾಗಳು ಮತ್ತು ಜಿ–20ರ ಸದಸ್ಯರು, ಆಹ್ವಾನಿತ ದೇಶಗಳು ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳ ನಿಯೋಗಗಳ ಮುಖ್ಯಸ್ಥರ ನೇತೃತ್ವದಲ್ಲಿ 120ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಈ ಎಲ್ಲಾ ಪ್ರತಿನಿಧಿಗಳು ನಾಯಕರ ಘೋಷಣೆಯ ರಚನೆಯ ಚರ್ಚೆಯಲ್ಲಿ ಭಾಗವಹಿಸಲಿದ್ದಾರೆ. ಈ ಘೋಷಣೆಗಳನ್ನು ಅಂತಿಮವಾಗಿ ನವದೆಹಲಿಯ ಶೃಂಗಸಭೆಯಲ್ಲಿ ಜಿ–20ರ ನಾಯಕರು ಅಂಗೀಕರಿಸಲಿದ್ದಾರೆ.ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಅಂತರ್ಗತ, ಮಹತ್ವಾಕಾಂಕ್ಷೆಯ, ಕ್ರಿಯಾ ಆಧಾರಿತ ಮತ್ತು ನಿರ್ಣಾಯಕ ಕಾರ್ಯಸೂಚಿಯ ದೃಷ್ಟಿಕೋನದಿಂದ ಮಾರ್ಗದರ್ಶಿಸಲ್ಪಟ್ಟ ಷರ್ಪಾಗಳು ಭಾರತದ ಅಧ್ಯಕ್ಷತೆಯಲ್ಲಿ ಹಸಿರು ಅಭಿವೃದ್ಧಿ, ಹವಾಮಾನ, ಹಣಕಾಸು, ಮತ್ತು ಪರಿಸರಕ್ಕಾಗಿ ಜೀವನಶೈಲಿ (ಎಲ್.ಐ.ಎಫ್.ಇ); ವೇಗವರ್ಧಿತ, ಅಂತರ್ಗತ ಮತ್ತು ಸ್ಥಿತಿಸ್ಥಾಪಕ ಬೆಳವಣಿಗೆ; ಸುಸ್ಥಿರ ಅಭಿವೃದ್ಧಿ ಗುರಿಗಳ ಪ್ರಗತಿಯನ್ನು ತೀವ್ರಗೊಳಿಸುವುದು; ತಾಂತ್ರಿಕ ರೂಪಾಂತರ ಮತ್ತು ವಿದ್ಯುನ್ಮಾನ ತಂತ್ರಜ್ಞಾನ ಸಾರ್ವಜನಿಕ ಮೂಲಸೌಕರ್ಯ; 21ನೇ ಶತಮಾನದ ಬಹುಪಕ್ಷೀಯ ಸಂಸ್ಥೆಗಳು; ಮತ್ತು ಮಹಿಳಾ ನೇತೃತ್ವದ ಅಭಿವೃದ್ಧಿಯ ಆದ್ಯತೆಗಳನ್ನು ಪ್ರತಿಬಿಂಬಿಸುವ ಪಠ್ಯದ ಬಗ್ಗೆ ಮಾತುಕತೆ ನಡೆಸಲಿದ್ದಾರೆ. ಈ ಆದ್ಯತೆಗಳು ಭಾರತದ ಅಧ್ಯಕ್ಷತೆಯ ಅವಧಿಯಲ್ಲಿ ವಿವಿಧ ಕಾರ್ಯ ಪ್ರವಾಹಗಳಲ್ಲಿನ ಚರ್ಚೆಗಳಿಗೆ ಮಾರ್ಗದರ್ಶನ ನೀಡಿವೆ ಎಂಬುದನ್ನು ಇಲ್ಲಿ ಸ್ಮರಿಸಬಹುದು.

# ಪೌಷ್ಟಿಕ ಆಹಾರ ಕೊರತೆಯಾಗದಂತೆ ಪೂರೈಸಿ

» ದಾವಣಗೆರೆ

ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳು ಮತ್ತು ಗರ್ಭಿಣಿ ಮಹಿಳೆಯರಿಗೆ ನೀಡುವ ಪೌಷ್ಠಿಕ ಆಹಾರದ ಕೊರತೆಯಾಗದಂತೆ ನೋಡಿಕೊಳ್ಳವುಂತೆ ಕೈಗಾರಿಕಾಭಿವೃದ್ಧಿ ಆಯುಕ್ತರು ಮತ್ತು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ನಿರ್ದೇಶಕರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಗುಂಜನ್ ಕೃಷ್ಣ ಅವರು ತಿಳಿಸಿದರು.



ಗುರುವಾರ ಜಿಲ್ಲಾ ಪಂಚಾಯತ್ ಕಚೇರಿ ಮುಖ್ಯ ಸಭಾಂಗಣದಲ್ಲಿ ಜರುಗಿದ ಪ್ರಗತಿ ಪರಿಶೀಲನಾ ಸಭೆ ಹಾಗೂ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ ಮಕ್ಕಳು ಮತ್ತು ಗರ್ಭಿಣಿ ಮಹಿಳೆಯರಿಗೆ ಪೌಷ್ಠಿಕ ಆಹಾರದ ಅಗತ್ಯ ಹೆಚ್ಚಾಗಿದ್ದು, ಅವರಿಗೆ ಕೊರತೆ ಬಾರದಂತೆ ಹಾಗೂ ಆರೋಗ್ಯದಲ್ಲಿ ಏರುಪೇರು ಉಂಟಾದಲ್ಲಿ ತುರ್ತಾಗಿ ಆರೋಗ್ಯ ಸೌಲಭ್ಯ ಒದಗಿಸುವಂತೆ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಮತ್ತು ಆರೋಗ್ಯಾಧಿಕಾರಿಗಳಿಗೆ ತಿಳಿಸಿದರು. ಜಿಲ್ಲೆಯಲ್ಲಿ ಚಿಕನ್ ಗುನ್ಯಾ ಮತ್ತು ಡೇಂಗ್ಯು ರೋಗ ಹೆಚ್ಚಾಗಿ ಕಂಡು ಬರುತ್ತಿದ್ದು, ಈ ಬಗ್ಗೆ ಆರೋಗ್ಯ ಇಲಾಖೆಯಿಂದ ಮನೆ–ಮನೆಗೂ ತೆರಳಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವಂತೆ ಅರಿವು ಮೂಡಿಸಲಾಗುತ್ತಿದೆಎಂದುಜಿಲ್ಲಾಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿದರು.ರಾಜ್ಯ ಸರ್ಕಾರದ ಶಕ್ತಿ ಯೋಜನೆಯು ಮಹಿಳೆಯರಿಗೆ ಉಪಯುಕ್ತವಾಗಿದ್ದು, ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ವ್ಯವಸ್ಥಿತ ರೀತಿಯಲ್ಲಿ ಬಸ್‌ಗಳ ವ್ಯವಸ್ಥೆ ಮಾಡಬೇಕು ಎಂದರು.ಜಿಲ್ಲೆಯಲ್ಲಿ ಹೆಚ್ಚಿನ ವಿದ್ಯಾರ್ಥಿಗಳಲ್ಲಿ ಓದುವ ಆಸಕ್ತಿ ಇದ್ದು, ಅರ್ಜಿ ಸಲ್ಲಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಕಲ್ಪಿಸಬೇಕು ಹಾಗೂ ಹಾಸ್ಟೆಲ್‌ಗಳಲ್ಲಿ ಕೊಠಡಿಗಳ ಕೊರತೆಯಿದ್ದು, ಆದಷ್ಟು ಶೀಘ್ರವಾಗಿ ಬಗೆಹರಿಸುತ್ತೇವೆ.ರೈತರಿಗೆ ಬೆಳೆ ವಿಮೆ ಹಾಗೂ ಸರ್ಕಾರವು ಕೃಷಿಗೆ ಮೀಸಲಿರಿಸಿದ ಯೋಜನೆಗಳ ಬಗ್ಗೆ ಸಂಪೂರ್ಣವಾದ ಮಾಹಿತಿ ನೀಡಬೇಕು. ಶಿಕ್ಷಣ ಇಲಾಖೆಯು ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ವಿದ್ಯಾರ್ಥಿಗಳಿಗೆ ಸಮಯಕ್ಕೆ ಸರಿಯಾಗಿ ಪಠ್ಯ ಹಾಗೂ ಸಮವಸ್ತ್ರದ ಪೂರೈಕೆ ಮಾಡಬೇಕು ಹಾಗೂ ಶಾಲೆ ಬಿಟ್ಟ ಮಕ್ಕಳನ್ನು ಮರು ಕರೆತರುವ ಪ್ರಯತ್ನ ಮಾಡಬೇಕು. ಜಿಲ್ಲೆಯಲ್ಲಿ ಸರ್ವೇ ಕಾರ್ಯವನ್ನು ಡ್ರೋನ್ ಗಳ ಸಹಾಯದಿಂದ ವೇಗವಾಗಿ ಪೂರ್ಣಗೊಳಿಸಬೇಕು.ಕೇಂದ್ರದ ಎನ್. ಆರ್.ಎಲ್.ಎಂ. ಯೋಜನೆಯು ಗ್ರಾಮೀಣ ಜೀವನೋಪಾಯದ ಉದ್ದೇಶವಾಗಿದ್ದು, ಫಲಾನುಭವಿಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಿ ಸೌಲಭ್ಯಗಳನ್ನು ಕ್ರಮಬದ್ಧವಾಗಿ ಒದಗಿಸಬೇಕು ಎಂದರು. ಜಿಲ್ಲಾಧಿಕಾರಿ ಶಿವಾನಂದ ಕಾಪಶಿ ಮಾತನಾಡಿ ಅಣಜಿ ಗ್ರಾಮದ ಕೆರೆ ತುಂಬಿದಾಗ ರಸ್ತೆಯ ಮೇಲೆ ನೀರು ಹರಿದು ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗುತ್ತಿತ್ತು. ಇದಕ್ಕೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.ಮಾಯಕೊಂಡ ಸಮೀಪದ ಕೊಡಗನೂರು ಭದ್ರಾ ಕಾಲುವೆಯ ದುರಸ್ಥಿ ಕಾರ್ಯ ಕೈಗೊಂಡು ಸುತ್ತಮುತ್ತಲಿನ ಜಮೀನುಗಳಿಗೆ ನೀರಾವರಿ ವ್ಯವಸ್ಥೆಗೆ ಅನುಕೂಲ ಮಾಡಿಕೊಡಲಾಗಿದೆ ಎಂದರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಕೆ. ಇಟ್ನಾಳ್, ಉಪ ಕಾರ್ಯದರ್ಶಿ ಕೃಷ್ಣ ನಾಯ್ಕ್, ಮುಖ್ಯ ಲೆಕ್ಕಾಧಿಕಾರಿ ಸೌಮ್ಯಶ್ರೀ, ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಅನ್ನಭಾಗ್ಯ ಯೋಜನೆ: ನೇರ ನಗದು ವರ್ಗಾವಣೆ

» ದಾವಣಗೆರೆ

ಅಂತ್ಯೋದಯ ಅನ್ನಯೋಜನೆ (ಎಎವೈ) ಮತ್ತು ಆದ್ಯತಾ(ಪಿ.ಹೆಚ್.ಹೆಚ್) ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬದ ಮುಖ್ಯಸ್ಥರ ಬ್ಯಾಂಕ್‌ಖಾತೆಗೆ ಆಃಖಿ ಮೂಲಕ ಹಣ ಪಾವತಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಶಿವಾನಂದ ಕಾಪಶಿ ತಿಳಿಸಿದ್ದಾರೆ.



ಸರ್ಕಾರದ ಆದೇಶದನ್ವಯ ಅಧ್ಯತಾ ಮತ್ತು ಅಂತ್ಯೋದಯ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿ ವಿತರಿಸಲು ಉದ್ದೇಶಿಸಲಾಗಿದ್ದು, 05 ಕೆ.ಜಿ ಅಕ್ಕಿಯ ಬದಲಾಗಿ ಪಡಿತರ ಚೀಟಿ ಕುಟುಂಬದಲ್ಲಿನ ಪ್ರತಿ ಫಲಾನುಭವಿಗೆ ಪ್ರತಿ ಕೆ.ಜಿಗೆ ರೂ. 34 ರಂತೆ ಪ್ರತಿ ಸದಸ್ಯರಿಗೆ ರೂ.170 ರಂತೆ ಪಡಿತರ ಕುಟುಬಂದ ಮುಖ್ಯಸ್ಥರ ಖಾತೆಗೆ ನಗದು ವರ್ಗಾವಣೆ ಮಾಡಲಾತ್ತಿದ್ದು, ಕಳೆದ ಮೂರು ತಿಂಗಳಲ್ಲಿ ಪಡಿತರ ಆಹಾರ ಧಾನ್ಯವನ್ನು ಪಡೆದುಕೊಂಡಿರುವ ಕುಟುಂಬಗಳು ನಗದು ವರ್ಗಾವಣೆ ಸೌಲಭ್ಯವನ್ನು ಪಡೆಯಲು ಅರ್ಹರಿದ್ದು, ಪಡಿತರ ಆಹಾರಧಾನ್ಯವನ್ನು ಪಡೆಯದೆ ಇರುವವರು ಯೋಜನೆಗೆ ಅರ್ಹರಿರುವುದಿಲ್ಲ. ಜಿಲ್ಲೆಯಲ್ಲಿ ಒಟ್ಟು 42,258 ಪಡಿತರ ಚೀಟಿಗಳಲ್ಲಿ ಕುಟುಂಬದ ಮುಖ್ಯಸ್ಥರು ಸಕ್ರಿಯ ಬ್ಯಾಂಕ್‌ಖಾತೆಯನ್ನು ಹೊಂದಿರುವುದಿಲ್ಲ, ಕೆಲವರು ಬ್ಯಾಂಕ್ ಖಾತೆಯೊಂದಿಗೆ ಆಧಾರ್ ಜೋಡಣೆ ಮಾಡಿರುವುದಿಲ್ಲ, ಇನ್ನೂ ಕೆಲವರು ಬ್ಯಾಂಕ್ ಖಾತೆಯನ್ನು ತೆರೆದಿರುವುದಿಲ್ಲ ಹಾಗೂ ಬ್ಯಾಂಕ್ ಇಛಿಥಿಛಿ ಮಾಡಿಸಿರುವುದಿಲ್ಲ ಆದ್ದರಿಂದ ಚಾಲ್ತಿಯಲ್ಲಿರುವ ಬ್ಯಾಂಕ್‌ಖಾತೆಯ ಮಾಹಿತಿಯನ್ನು ಆಧಾರ್ ಸಂಖ್ಯೆಯೊಂದಿಗೆ ಜೋಡಣೆ ಮಾಡಿದ ನಂತರ ಹಾಗೂ ಇದುವರೆಗೂ ಕುಟುಂಬದ ಮುಖ್ಯಸ್ಥರು ಸಕ್ರಿಯ ಬ್ಯಾಂಕ್‌ಖಾತೆ ಹೊಂದಿಲ್ಲದಿದ್ದರೆ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಖಾತೆಯನ್ನು ತೆರೆದರೆ ಮುಂದಿನ ಮಾಹೆಯ ಯೋಜನೆಗೆ ಅರ್ಹರಾಗಿರುತ್ತಾರೆ. ಆದ್ದರಿಂದ ಪಡಿತರ ಚೀಟಿದಾರರು ಸಮಿಪದ ಅಂಚೆ ಕಛೇರಿಗಳಲ್ಲಿ ಜುಲೈ 20 ರೊಳಗಾಗಿ ಐ.ಪಿ.ಪಿ.ಬಿ ಖಾತೆ ತೆರೆಯುವ ಮೂಲಕ ಸರಳವಾಗಿ ನಗದು ವರ್ಗಾವಣೆ ಸೌಲಭ್ಯ ಪಡೆಯಬಹುದುನಗದು ವರ್ಗಾವಣೆ ಸೌಲಭ್ಯ (ಆಃಖಿ)ಯ ಪ್ರಥಮ ಹಂತದ ಪಟ್ಟಿಯಲ್ಲಿ ಸೇರ್ಪಡೆಗೊಳ್ಳದ ಪಡಿತರಚೀಟಿದಾರರಲ್ಲಿ ಬಹುತೇಕ ಬ್ಯಾಂಕ್‌ಖಾತೆ ವಿವರಗಳಿಗೆ ಸಂಬಂಧಿಸಿರುವುದರಿಂದ ಅಂತವರುತಮ್ಮ ಬ್ಯಾಂಕ್‌ಗಳಿಗೆ ಭೇಟಿ ನೀಡಿ ಶೀಘ್ರವಾಗಿ ಖಾತೆಗಳನ್ನು ಸರಿಪಡಿಸಿಕೊಳ್ಳಲು ತಿಳಿಸಿದೆ"ಹಣ ವರ್ಗಾವಣೆಯಾದ ಕುರಿತು ಹಾಗೂ ಇತರ ವಿವರಗಳನ್ನು https://ahara.kar.nic.in/status2/status_of_dbt.aspx ಪಡೆಯಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ ತಮ್ಮ ವ್ಯಾಪ್ತಿಯಲ್ಲಿ ಬರುವ ನ್ಯಾಯಬೆಲೆ ಅಂಗಡಿ ಗಳನ್ನು/ತಾಲ್ಲೂಕು ಕಛೇರಿಗಳನ್ನು ಸಂಪರ್ಕಿಸಿ.

## ಐಯ್ಯನಹಳ್ಳಿ ಕುರುಬರಹಟ್ಟಿ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ: ಪ್ರತಿಭಟನೆ



» ಚಿತ್ರದುರ್ಗ

ತಾಲ್ಲೂಕಿನ ಹಿರೇಗುಂಟನೂರು ಹೋಬಳಿ ಐಯ್ಯನಹಳ್ಳಿ ಕುರುಬರಹಟ್ಟಿಯಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವವರ ಮೇಲೆ ಕಾನೂನು ರೀತಿಯ ಕ್ರಮ ಕೈಗೊಳ್ಳುವಂತೆ ಐಯ್ಯನಹಳ್ಳಿ ಕುರುಬರಹಟ್ಟಿ ಗ್ರಾಮಸ್ಥರು ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿ ಅಬಕಾರಿ ಇಲಾಖೆಗೆ ಮನವಿ ಸಲ್ಲಿಸಿದರು. ಕೃಷ್ಣಮೂರ್ತಿ, ಅಂಗಡಿ ಪಾರ್ವತಮ್ಮನ ಮಗ ಮಂಜುನಾಥ, ತಿಪ್ಪೇಸ್ವಾಮಿ, ಅಂಜಿನಪ್ಪ, ಶಾರದಮ್ಮ, ಹುಚ್ಚಪ್ಪ, ಮಮತ, ತಿಪ್ಪಮ್ಮ, ಈಡಿಗರ ರುದ್ರಪ್ಪನ ಮಗಳು ರತ್ನಮ್ಮ, ಕಡ್ಲೆಪ್ಪರ ಕೆಂಚಪ್ಪ, ಚೌಡಮ್ಮ ಇವರುಗಳು ಅಂಗಡಿ ಮನೆಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವುದರಿಂದ ಗ್ರಾಮದಲ್ಲಿ ಕುಡುಕರ ಹಾವಳಿ ಜಾಸ್ತಿಯಾಗಿ ಎಲ್ಲೆಂದರಲ್ಲಿ ಮದ್ಯದ ಬಾಟಲಿಗಳನ್ನು ಎಸೆದು ಗಲಾಟೆ ಮಾಡುತ್ತಿದ್ದಾರೆ. ವಿದ್ಯಾರ್ಥಿಗಳು, ವೃದ್ದರು,ಮಹಿಳೆಯರು ತೊಂದರೆ ಅನುಭವಿಸುವಂತಾಗಿದೆ. ಕೂಲಿ ಮಾಡಿ ಸಿಗುವ ಹಣದಲ್ಲಿ ಮದ್ಯ ಸೇವಿಸಿ ಬರುವ ಪುರುಷರು ಗ್ರಾಮದಲ್ಲಿ ಅಶಾಂತಿಯುಂಟು ಮಾಡುತ್ತಿರುವುದರಿಂದ ಸಂಬಂಧಪಟ್ಟ ಅಧಿಕಾರಿಗಳು ಮದ್ಯ ಮಾರುವವರ ವಿರುದ್ದ ಕ್ರಮ ಕೈಗೊಂಡು ಐಯ್ಯನಹಳ್ಳಿ ಕುರುಬರಹಟ್ಟಿ ಗ್ರಾಮವನ್ನು ಮದ್ಯಮುಕ್ತವನ್ನಾಗಿ ಮಾಡುವಂತೆ ಮನವಿ ಮಾಡಿದರು.

ಗ್ರಾಮ ಪಂಚಾಯಿತಿ ಸದಸ್ಯರುಗಳಾದ ಶಂಕರಮ್ಮ, ಜಯಣ್ಣ, ಶಿವಾನಂದಪ್ಪ ಹಾಗೂ ಗ್ರಾಮಸ್ಥರಾದ ರತ್ನಮ್ಮ, ಗುತ್ಯಮ್ಮ, ಲೋಲಮ್ಮ, ಶಂಕರಮ್ಮ, ಶಿವಮ್ಮ, ಬಿ.ರುದ್ರಮ್ಮ,ಟಿ.ಜಗದೀಶ,ನಿಂಗಪ್ಪ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಎಡಿಸಿಗೆ ಉಪ್ಪಾರ ಸಮಾಜದಿಂದ ಅಭಿನಂದನೆ

» ಚಿತ್ರದುರ್ಗ

ನೂತನವಾಗಿ ಅಧಿಕಾರ ವಹಿಸಿಕೊಂಡಿರುವ ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿರವರಿಗೆ ಜಿಲ್ಲಾ ಉಪ್ಪಾರ ಸಮಾಜದಿಂದ ಹೂಗುಚ್ಚ ನೀಡಿ ಅಭಿನಂದಿಸಲಾಯಿತು.

ಜಿಲ್ಲಾ ಉಪ್ಪಾರ ಸಮಾಜದ ನಿಕಟಪೂರ್ವ ಅಧ್ಯಕ್ಷ ಆರ್.ಮೂರ್ತಿ ಮಾತನಾಡಿ ಈ ಹಿಂದೆ ಚಿತ್ರದುರ್ಗದಲ್ಲಿ ತಹಶೀಲ್ದಾರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕೆಲಸದ ನಿಮಿತ್ತ ಕಚೇರಿಗೆ ಬರುವವರ ಕುಂದು ಕೊರತೆ ಸಮಸ್ಯೆಗಳನ್ನು ಆಲಿಸಿ ಸ್ಪಂದಿಸುತ್ತಿದ್ದರಿಂದ ಎಲ್ಲರ ಮನಸ್ಸಿನಲ್ಲಿ ಉಳಿದಿದ್ದೀರಿ. ಈಗ ಅಪರ ಜಿಲ್ಲಾಧಿಕಾರಿಯಾಗಿ ಚಿತ್ರದುರ್ಗಕ್ಕೆ ವರ್ಗಾವಣೆಯಾಗಿ ಬಂದಿರುವುದು ನಮಗೆಲ್ಲಾ ಖುಷಿ ಕೊಟ್ಟಿದೆ ಎಂದು ಹರ್ಷ ವ್ಯಕ್ತಪಡಿಸಿದರು.



ಉಪ್ಪಾರ ಸಮಾಜದ ಹೆಚ್.ಅಜ್ಜಪ್ಪ ಮೆದೇಹಳ್ಳಿ, ನಿಕಟಪೂರ್ವ ಕಾರ್ಯದರ್ಶಿ ಬಸವರಾಜ್ ಹಂಪಯ್ಯನಮಾಳಿಗೆ, ಜಿಲ್ಲಾ ಉಪ್ಪಾರ ಸಮಾಜದ ಗೌರವಾಧ್ಯಕ್ಷ ನಿವೃತ್ತ ಡಿ.ವೈ.ಎಸ್ಪಿ. ಎಸ್.ನಾಗರಾಜ್, ಉದ್ಯಮಿ ಜಯಣ್ಣ, ಪ್ರಹ್ಲಾದ್ ಈ ಸಂದರ್ಭದಲ್ಲಿ ಹಾಜರಿದ್ದು ಶುಭ ಹಾರೈಸಿದರು.

## ರೋಟರಿ ಶಿವಮೊಗ್ಗ ಪೂರ್ವ ಪದವಿ ಸ್ವೀಕಾರ ಜುಲೈ 14ಕ್ಕೆ

▪ ಶಿವಮೊಗ್ಗ

ರೋಟರಿ ಶಿವಮೊಗ್ಗ ಪೂರ್ವ ಸಂಸ್ಥೆಯ 2023–24ನೇ ಸಾಲಿನ ಪದಾಧಿಕಾರಿಗಳ ಪದವಿ ಸ್ವೀಕಾರ ಸಮಾರಂಭವನ್ನು ಶಿವಮೊಗ್ಗ ನಗರದ ಸಾಯಿ ಇಂಟರ್‌ನ್ಯಾಷನಲ್ ಹೋಟೇಲ್‌ನಲ್ಲಿ ಜುಲೈ 14ರ ಸಂಜೆ 6ಕ್ಕೆ ಹಮ್ಮಿಕೊಳ್ಳಲಾಗಿದೆ. ರೋಟರಿ ಜಿಲ್ಲೆ 2024–25ರ ನಿಯೋಜಿತ ಗವರ್ನರ್ ಸಿ.ಎ.ದೇವ್ ಆನಂದ್ ಪ್ರತಿಷ್ಠಾಪನಾಧಿಕಾರಿಯಾಗಿ ಪಾಲ್ಗೊಳ್ಳುವರು. ವಲಯ 11ರ ಸಹಾಯಕ ಗವರ್ನರ್ ರವಿ ಕೋಟೋಜಿ, ಜೋನಲ್ ಲೆಫ್ಟಿನೆಂಟ್ ಧರ್ಮೇಂದರ್ ಸಿಂಗ್, ನಿಕಟಪೂರ್ವ ಅಧ್ಯಕ್ಷೆ ಸುಮತಿ ಕುಮಾರಸ್ವಾಮಿ, ನಿಕಟಪೂರ್ವ ಕಾರ್ಯದರ್ಶಿ ಕೆ.ಕುಮಾರಸ್ವಾಮಿ ಉಪಸ್ಥಿತರಿರುವರು. ರೋಟರಿ ಶಿವಮೊಗ್ಗ ಪೂರ್ವ ಸಂಸ್ಥೆಯ 2023–24 ನೇ ಸಾಲಿಗೆ ನೂತನ ಕಾರ್ಯಕಾರಿ ಮಂಡಳಿ ಅಧ್ಯಕ್ಷರಾಗಿ ಸತೀಶ್ ಚಂದ್ರ, ಉಪಾಧ್ಯಕ್ಷರಾಗಿ ಜಿ.ವಿಜಯ್‌ಕುಮಾರ್ಆಯ್ಕೆಯಾಗಿದ್ದಾರೆ.

**ಪ್ರಮುಖ ಸುದ್ದಿ**

# ಕಳಪೆ ಮೊಟ್ಟೆಗಳು ಗರ್ಭಿಣಿಯರ ಆರೋಗ್ಯಕ್ಕೆ ಕುತ್ತು

» ಬೆಂಪಗಳೂರು

ಗರ್ಭಿಣಿಯರಿಗೆ ಮತ್ತು ಮಕ್ಕಳಿಗೆ ವಿತರಿಸಲು ರಾಜ್ಯದ ಅಂಗನವಾಡಿಗಳಿಗೆ ಪೂರೈಕೆಯಾಗುತ್ತಿರುವ ಮೊಟ್ಟೆಗಳು ಕಳಪೆಯಾಗಿವೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳ ಬೇಜವಾಬ್ದಾರಿಯಿಂದಾಗಿ ಪೌಷ್ಠಕತೆಗೆ ಸಹಾಯವಾಗಬೇಕಾದ ಮೊಟ್ಟೆ ಇದೀಗ ಗರ್ಭಿಣಿಯರ ಆರೋಗ್ಯಕ್ಕೆ ಕುತ್ತು ತರುತ್ತಿದೆ.



ರಾಜ್ಯ ಸರ್ಕಾರದ ಯೋಜನೆಗಳಲ್ಲಿ ಮಕ್ಕಳು, ಗರ್ಭಿಣಿಯರಿಗೆ ಮೊಟ್ಟೆ ಪೂರೈಕೆಯು ಒಂದಾಗಿದೆ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಂಗನವಾಡಿಗಳಿಗೆ ಪೂರೈಕೆಯಾಗುತ್ತಿರುವ ಮೊಟ್ಟೆಗಳು ಕೆಟ್ಟು ಹೋಗಿವೆ. ಬೇಯಿಸಿದ ನಂತರ ಸಿಪ್ಪೆತೆಗೆದು ನೋಡಿದರೆ, ಮೊಟ್ಟೆ ಕಪ್ಪಾಗಿದ್ದು ಗೊತ್ತಾಗಿರುವುದು, ಆರೋಗ್ಯ ಹಾನಿಯ ಮುನ್ಸೂಚನೆ ಎಂಬಂತಾಗಿದೆ. ಹೀಗಾಗಿ ಸಾರ್ವಜನಿಕ ವಲಯದಲ್ಲಿ ಸರ್ಕಾರದ ವಿರುದ್ಧ ಆಕ್ರೋಶ ಕೇಳಿ ಬಂದಿದೆ. ವಿವಿಧ ಯೋಜನೆಗಳಂತೆ ಮೊಟ್ಟೆ ವಿತರಣೆಯಲ್ಲಿಯೂ ಸರ್ಕಾರ ಭ್ರಷ್ಟಾಚಾರ ನಡೆಸುತ್ತಿದೆಯೇ ಎಂಬ ಅನುಮಾನ ಮೂಡಿದೆ.ಈ ಕುರಿತು ಗುರುವಾರ ಕರ್ನಾಟಕ ಬಿಜೆಪಿ ಪಕ್ಷ ಕಟುವಾಗಿ ಟ್ವೀಟ್ ಮಾಡಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದೆ. "ಕಳಪೆ ಆಹಾರ ಕೊಡುವುದೂ ಒಂದೇ, ಕೈಯಾರೆ ವಿಷ ಉಣಿಸುವುದೂ ಒಂದೇ. ಅದರಲ್ಲೂ ಮಕ್ಕಳು ಮತ್ತು ಗರ್ಭಿಣಿಯರಿಗೆ ಪೌಷ್ಟಿಕತೆ ಹೆಸರಲ್ಲಿ ವಿಷ ಪೂರಣವು ನಾಗರಿಕ ಸಮಾಜವೇ ತಲೆತಗ್ಗಿಸುವ ಕೆಲಸ ಎಂದು ಸರ್ಕಾರವನ್ನು ಟೀಕಿಸಿದೆ.

**ಮೊಟ್ಟೆ: ಎಟಿಎಂ ಸರ್ಕಾರಕ್ಕೆ ಕಲೆಕ್ಷನ್ ಆದರೆ ಸಾಕು:** ಆದರೆ ಸಾಮಾಜಿಕ ಪ್ರಜ್ಞೆಯನ್ನೇ ಮರೆತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಅಮಾನುಷ ಎಟಿಎಂ ಸರ್ಕಾರಕ್ಕೆ (#ಂಖಿಒಖಚಿಡಿಞಚಿಡಿಚಿ) ವಾರದ ಕಲೆಕ್ಷನ್ ಸಂದಾಯವಾದರೆ ಆಯಿತು. ಬೇರೆಲ್ಲದರ ಬಗ್ಗೆ ಚಿಂತೆಯೇ ಇಲ್ಲ ಎಂದು ಬಿಜೆಪಿ ಲೇವಡಿ ಮಾಡಿದೆ ಮೂಲಕಮಕ್ಕಳುಮತ್ತುಅಂಗನವಾಡಿಗಳಿಗೆ ಪೂರೈಸುತ್ತಿರುವ ಮೊಟ್ಟೆ ವಿತರಣೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಬಿಜೆಪಿ ಆರೋಪ ಮಾಡಿದೆ.

ಹಾಸನ, ಕೊಡಗು, ಹಾವೇರಿ ಜಿಲ್ಲೆ ಸೇರಿ ಕೆಲವು ಜಿಲ್ಲೆಗಳ ಅಂಗನವಾಡಿಗಳಿಗೆ ಕೆಟ್ಟ ಮೊಟ್ಟೆಗಳನ್ನು ವಿತರಿಸಲಾಗಿದೆ. ಹಾಸನ ಜಿಲ್ಲೆ ಹೊಳೆನರಸೀಪುರದಲ್ಲಿ ಎರಡು ಪ್ರಕರಣ ಪತ್ತೆಯಾಗಿದೆ. ಇದರಿಂದ ಗರ್ಭಿನಿಯರು ಮೊಟ್ಟೆ ಪಡೆಯಲು ಹಿಂದೇಟು ಹಾಕುವಂತಾಗಿದೆ. ಹಾವೇರಿ ಕೆಲವು ಅಂಗನವಾಡಿಗಳಲ್ಲಿ ಮಕ್ಕಳು ಮತ್ತು ಗರ್ಭಿಣಿಯರಿಗೆ ನೀಡಲಾಗುತ್ತಿರುವ ಮೊಟ್ಟೆಗಳಲ್ಲಿ ಕಳ್ಳಾಟ ನಡೆದಿದೆ ಎಂದು ತಿಳಿದು ಬಂದಿದೆ.

ಇನ್ನೂ ಕೊಡಗು ಜಿಲ್ಲೆಯ ಕುಶಾಲನಗರ ತಾಲೂಕಿನ ಬಸವತ್ತೂರು ಗ್ರಾಮದ ಅಂಗನವಾಡಿಗೂ ಕೊಳೆತ ಮೊಟ್ಟೆ ಪೂರೈಕೆ ಆಗಿದೆ. ಎಲ್ಲೆಲ್ಲಿ ಕಳಪೆ ಮೊಟ್ಟೆ ಪೂರೈಕೆ ಆಗಿವೆಯೋ ಅಲ್ಲೆಲ್ಲ ಬೇಯಿಸಿ ಮೊಟ್ಟೆ ಸಿಪ್ಪೆ ಬಿಡಿಸಿದಾಗ ಮೊಟ್ಟೆ ಕಪ್ಪು ಬಣ್ಣಕ್ಕೆ ತಿರುಗಿದೆ. ಒಳಭಾಗ ಪೂರ್ಣ ಕಪ್ಪಾಗಿದ್ದು, ಕೊಳೆತ ಗಬ್ಬು ವಾಸನೆ ಬರುತ್ತಿದೆ. ಇಂತಹ ಮೊಟ್ಟೆಯನ್ನು ಮಕ್ಕಳು, ಗರ್ಭಿಣಿಯರ ಹೊಟ್ಟೆ ಸೇರಿದಂತೆ ಎದುರಾಗುವ ಅನಾರೋಗ್ಯಕ್ಕೆ ಯಾರ ಹೊಣೆ ಎಂಬ ಪ್ರಶ್ನೆ ಎದ್ದಿದೆ.

**ಹಿಂದೆ 5–6 ರೂ. ಪೂರೈಕೆ: ಸದ್ಯ ಹಣ ಬಿಡುಗಡೆಯಾಗಿಲ್ಲ:** ಈ ಹಿಂದಿನ ಸರ್ಕಾರ ಒಂದು ಮೊಟ್ಟೆ ಪೂರೈಕೆಗೆ 5–6 ರೂ. ಕೊಡುತ್ತಿತ್ತು. ಸದ್ಯ ಮೊಟ್ಟೆಗಳ ದರದಲ್ಲಿ ಏರಿಕೆ ಆಗಿದ್ದು, ಗುತ್ತಿಗೆದಾರರು ಖರೀದಿಗೆ ಕಷ್ಟಪಡುತ್ತಿದ್ದಾರೆ. ಮೂರು ನಾಲ್ಕು ತಿಂಗಳಾದರೂ ಮೊಟ್ಟೆ ವಿತರಣೆಗೆ ಸರ್ಕಾರ ಅನುದಾನ ಬಿಡುಗಡೆ ಮಾಡಿಲ್ಲ.

ಗುತ್ತಿಗೆದಾರರು ಸಣ್ಣ ಗಾತ್ರದ ಮತ್ತು ಕಳಪೆ ಗುಣಮಟ್ಟದ ಮೊಟ್ಟೆಗಳನ್ನು ಅಂಗನವಾಡಿಗಳಿಗೆ ಪೂರೈಕೆ ಮಾಡುತ್ತಾರೆ. ಅಗತ್ಯ ಬೇಡಿಕೆಯಷ್ಟು ನೀಡುತ್ತಿಲ್ಲ. ಕೊಳೆತ ಮೊಟ್ಟೆಗಳನ್ನು ನಾವು ಬಿಡಾಡುತ್ತೇವೆ. ಹೀಗಾಗಿ ಮೊಟ್ಟೆ ಕೊರತೆ ಇನ್ನಷ್ಟು ಕಾಡುತ್ತದೆ. ಮಕ್ಕಳಿಗೆ ಉತ್ತಮ ಮೊಟ್ಟೆ ಪೂರೈಸಲು ಸಾಧ್ಯವಾಗದ ಸ್ಥಿತಿ ಇದೆ. ಒಂದು ವೇಳೆ ಮನೆಗೆ ಮೊಟ್ಟೆ ಒಯ್ದವರು ಕೆಟ್ಟಿವೆ ಎಂದು ಕಾರ್ಯಕರ್ತೆಯರ ಬಳಿ ಜಗಳಕ್ಕೆ ಬರುತ್ತಾರೆ.

## ಫಾಸ್ಟ್ ನ್ಯೂಸ್

### ಜುಲೈ 14, 2023 ಸುವರ್ಣಾಕ್ಷರಗಳಲ್ಲಿ ಅಚ್ಚಳಿಯದೆ ಉಳಿಯಲಿದೆ

#### ಚಂದ್ರಯಾನ-3ಗೆ ಟ್ವೀಟ್ ಮಾಡಿ ವಿಶ್ ಮಾಡಿದ ಪ್ರಧಾನಿ ಮೋದಿ



» ನವದೆಹಲಿ

ಭಾರತದ ಮೂರನೇ ಚಂದ್ರನ ಅನ್ವೇಷಣಾ ಕಾರ್ಯಾಚರಣೆಯಾದ ಚಂದ್ರಯಾನ್ -3 ಉಡಾವಣೆಗೆ ಕೆಲವು ಗಂಟೆಗಳ ಮೊದಲು, ಪ್ರಧಾನಿ ನರೇಂದ್ರ ಮೋದಿ ಅವರು ಜುಲೈ 14, 2023, ಮಿಷನ್ನ ಉಡಾವಣಾ ದಿನಾಂಕವು ಭಾರತದ ಬಾಹ್ಯಾಕಾಶ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಯಾವಾಗಲೂ ಸುವರ್ಣಾಕ್ಷರಗಳಲ್ಲಿ ಕೆತ್ತಲ್ಪಡುತ್ತದೆ ಮತ್ತು 'ಗಮನಾರ್ಹ' ಮಿಷನ್ ನಮ್ಮ ರಾಷ್ಟ್ರದ ಭರವಸೆಗಳು ಮತ್ತು ಕನಸುಗಳನ್ನು ಹೊತ್ತೊಯ್ಯುತ್ತದೆ ಎಂದು ಟ್ವೀಟ್ ಮಾಡಿದ್ದಾರೆ. ಚಂದ್ರಯಾನ್ -3 ರ ಕೆಲವು ತಾಂತ್ರಿಕ ವಿವರಗಳನ್ನು ಪ್ರಧಾನಿ ಉಲ್ಲೇಖಿಸಿದ್ದಾರೆ, ಇದರಲ್ಲಿ ಬಾಹ್ಯಾಕಾಶ ನೌಕೆಯು ಕಕ್ಷೆಯನ್ನು ಹೆಚ್ಚಿಸುವ ಕುಶಲತೆಗಳನ್ನು ಮಾಡಿದ ನಂತರ ಚಂದ್ರನ ವರ್ಗಾವಣೆ ಪಥಕ್ಕೆ ಪ್ರವೇಶಿಸುತ್ತದೆ ಎಂಬ ಅಂಶವೂ ಸೇರಿದೆ. ಬಾಹ್ಯಾಕಾಶ ನೌಕೆಯು 300,000 ಕಿಲೋಮೀಟರ್ ದೂರವನ್ನು ಕ್ರಮಿಸುತ್ತದೆ ಮತ್ತು ಮುಂಬರುವ ವಾರಗಳಲ್ಲಿ ಚಂದ್ರನನ್ನು ತಲುಪುತ್ತದೆ ಎಂದು ಅವರು ಬರೆದಿದ್ದಾರೆ.ಚಂದ್ರಯಾನ -3 ಚಂದ್ರನ ಮೇಲ್ಮೈಯನ್ನು ಅಧ್ಯಯನ ಮಾಡುವ ಮತ್ತು 'ನಮ್ಮ ಜ್ಞಾನವನ್ನು ಹೆಚ್ಚಿಸುವ' ಹಲವಾರು ವೈಜ್ಞಾನಿಕ ಉಪಕರಣಗಳನ್ನು ಸಹ ಹೊಂದಿದೆ ಎಂದು ಪ್ರಧಾನಿ ಹೇಳಿದರು.

### ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ಹೆದ್ದಾರಿಯಲ್ಲಿ ಸರಣಿ ಅಪಘಾತ

» ರಾಮನಗರ

ಬೆಂಗಳೂರು ಮೈಸೂರು ಎಕ್ಸ್ ಹೆದ್ದಾರಿಯಲ್ಲಿ ಸರಣಿ ಅಪಘಾತಗಳೂ ನಡೆಯುತ್ತಲೇ ಇವೆ. ಜಿಲ್ಲೆಯ ಬಿಡದಿ ಬಳಿಯ ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ಹೆದ್ದಾರಿಯ ನೆಲ್ಲಿಗುಂಟಕೆರೆ ಬಳಿ ಬೆಳಿಗ್ಗೆ ಲಾರಿ, ಕೆಎಸ್‌ಆರ್‌ಟಿಸಿ ಸ್ಲೀಪರ್ ಬಸ್ ಹಾಗೂ ಕಾರಿನ ನಡುವೆ ಸರಣಿ ಅಪಘಾತ ನಡೆದಿದೆ. ಘಟನೆಯಲ್ಲಿ ಕಾರಿನಲ್ಲಿದ್ದ ಕೆಲವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಸ್ಥಳೀಯವಾಗಿ ಚಿಕಿತ್ಸೆ ಕೊಡಿಸಲಾಗಿದೆ. ಘಟನೆಯಲ್ಲಿ ಮೂರೂ ವಾಹನಗಳ ಮುಂಭಾಗ ಜಖಂಗೊಂಡಿದೆ. ಸ್ಥಳಕ್ಕೆ ಬಂದ ಬಿಡದಿ ಠಾಣೆ ಪೊಲೀಸರು ಅಪಘಾತಕ್ಕೀಡಾದ ವಾಹನಗಳನ್ನು ಟೋಯಿಂಗ್ ಮಾಡಿ, ಸಂಚಾರಕ್ಕೆ ಅನುವು ಮಾಡಿಕೊಟ್ಟರು.

### ಫಾಕ್ಸ್‌ಕಾನ್ ಕಂಪನಿಯಿಂದ 50 ಸಾವಿರ ಉದ್ಯೋಗ ಸೃಷ್ಟಿ

» ಬೆಂಗಳೂರು

ಜಗತ್ತಿನ ದಿಗ್ಗಜ ಐಫೋನ್ ತಯಾರಿಕಾ ಕಂಪನಿಯ ಫಾಕ್ಸ್‌ಕಾನ್ ಬೆಂಗಳೂರಿನಲ್ಲಿ ತನ್ನ ಉದ್ದಿಮೆಯನ್ನು ಸ್ಥಾಪಿಸುತ್ತಿದೆ. ಇದರಿಂದ 50 ಸಾವಿರ ಉದ್ಯೋಗವಕಾಶಗಳು ಸೃಷ್ಟಿಯಾಗಲಿವೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ವಿಧಾನಸಭೆಯಲ್ಲಿಂದು ಹೇಳಿದರು. ಪ್ರಶ್ನೋತ್ತರ ಅವಧಿಯಲ್ಲಿ ಫಾಕ್ಸ್‌ಕಾನ್ ಕಾರ್ಖಾನೆ 300 ಎಕರೆ ಪ್ರದೇಶದಲ್ಲಿ ದೊಡ್ಡಬಳ್ಳಾಪುರ ಬಳಿ ತಲೆ ಎತ್ತಲಿದೆ. ಈ ಕಂಪನಿಗೆ ಜಾಗ ಒದಗಿಸುವ ಬಗ್ಗೆ ಸ್ವಲ್ಪ ಸಮಸ್ಯೆಗಳಿದ್ದವು. ತಾವೇ ಖುದ್ದು ನಾಲ್ಕು ಬಾರಿ ಕಂಪನಿಯ ಮುಖ್ಯಸ್ಥರೊಂದಿಗೆ ಚರ್ಚೆ ನಡೆಸಿದ್ದೇನೆ. ಈಗ ಎಲ್ಲವೂ ಸರಿ ಹೋಗಿದೆ. 300 ಎಕರೆ ಪ್ರದೇಶದಲ್ಲಿ ತನ್ನ ಉದ್ದಿಮೆಯನ್ನು ಆರಂಭಿಸಲಿದೆ. ಇದಕ್ಕಾಗಿ ಒಂದು ಬಿಲಿಯನ್ ಡಾಲರ್ ಹೂಡಿಕೆ ಮಾಡಲಿದೆ ಎಂದರು.

### ಉಚಿತ ತರಬೇತಿ

■ ದಾವಣಗೆರೆ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಹಾಗೂ ಜಿಎಂ ತಾಂತ್ರಿಕ ಮಹಾವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ಲೋಕಸೇವಾ ಆಯೋಗ ಇವರು ನಡೆಸುವ ಕೆ.ಎ.ಎಸ್. ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲಿರುವ ಅಭ್ಯರ್ಥಿಗಳಿಗೆ ಜುಲೈ 17 ರಿಂದ 26 ರವರೆಗೆ ರೂಂ ನಂ:104, 3ನೇ ಮಹಡಿ, ಇಂಜಿನಿಯರಿಂಗ್ ಬ್ಲಾಕ್, ಜಿಎಂ ತಾಂತ್ರಿಕ ಮಹಾವಿದ್ಯಾಲಯ, ಕರೂರು ಇಂಡಸ್ಟ್ರಿಯಲ್ ಏರಿಯಾ, ಪಿ.ಬಿ. ರಸ್ತೆ, ದಾವಣಗೆರೆ ಇಲ್ಲಿ ಉಚಿತ ಪರೀಕ್ಷಾಪೂರ್ವ ತರಬೇತಿಯನ್ನು ಆಯೋಜಿಸಲಾಗಿದೆ. ತರಬೇತಿಗೆ ಹಾಜರಾಗಲಿಚ್ಛಿಸುವ ಅಭ್ಯರ್ಥಿಗಳು 17 ರ ಬೆಳಿಗ್ಗೆ 10 ಗಂಟೆಗೆ ತಮ್ಮ ಸ್ವಂತ ಖರ್ಚಿನಲ್ಲಿ ತರಬೇತಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 7406323294, 8618166204 ಯನ್ನು ಸಂಪರ್ಕಿಸಲು ರವೀಂದ್ರ ಡಿ ತಿಳಿಸಿದ್ದಾರೆ.

## ಕ್ಷಯ ರೋಗಿಗಳ ಪೌಷ್ಠಿಕಾಂಶ ಬಲವರ್ಧನೆಗಾಗಿ ದತ್ತು ಕಾರ್ಯಕ್ರಮ

# ಕ್ಷಯಮುಕ್ತ ಜಿಲ್ಲೆಯನ್ನಾಗಿಸೋಣ: ಡಾ.ಸುಧಾ

» ಚಿತ್ರದುರ್ಗ

ನಿಗದಿತ ಅವಧಿಯ ಚಿಕಿತ್ಸೆಯಿಂದ ಕ್ಷಯರೋಗ ಗುಣಪಡಿಸಬಹುದು ಹಾಗೂ ಕ್ಷಯಮುಕ್ತ ಜಿಲ್ಲೆಯನ್ನಾಗಿ ಮಾಡಬಹುದು ಎಂದು ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಸುಧಾ ಹೇಳಿದರು.

ಇಲ್ಲಿನ ಬುದ್ಧನಗರದ ನಗರ ಆರೋಗ್ಯ ಕೇಂದ್ರದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸ್ವಾಸ್ಥ್ಯ ಸರ್ಕಲ್ ಫೌಂಡೇಶನ್ ವತಿಯಿಂದ ನಿಕ್ಷಯ ಮಿತ್ರ ಯೋಜನೆ ಅಡಿ ಕ್ಷಯ ರೋಗಿಗಳ ಪೌಷ್ಠಿಕಾಂಶ ಬಲವರ್ಧನೆಗಾಗಿ ದತ್ತು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಎಲ್ಲಾ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಕ್ಷಯರೋಗ ಪತ್ತೆ ಚಿಕಿತ್ಸೆ ಹಾಗೂ ಕ್ಷಯರೋಗಕ್ಕೆ ಪ್ರತಿದಿನ ತೆಗೆದುಕೊಳ್ಳುವ ಔಷಧಿಗಳು ಸರ್ಕಾರದಿಂದ ಸಂಪೂರ್ಣ ಉಚಿತವಾಗಿ ನೀಡಲಾಗುತ್ತದೆ. ಕ್ಷಯ ರೋಗಿಗಳನ್ನು ನೋಂದಣಿ ಮಾಡಿಸಿಕೊಂಡು 6 ತಿಂಗಳವರಗೆ ಚಿಕಿತ್ಸೆ ನೀಡಲಾಗುತ್ತದೆ. ಸಾಮಾಜಿಕ ಹಾಗೂ ಆರ್ಥಿಕವಾಗಿ ದುರ್ಬಲ ವರ್ಗದವರನ್ನು ಕೇಂದ್ರಿಕೃತವಾಗಿಸಿಕೊಂಡು ಮನೆ ಭೇಟಿಯ ಮೂಲಕ ಸಕ್ರಿಯ ಕ್ಷಯರೋಗ ಪ್ರಕರಣಗಳನ್ನು ಪತ್ತೆ ಹಚ್ಚಿ ಚಿಕಿತ್ಸೆ ನೀಡಲಾಗುತ್ತದೆ. ನಿಮ್ಮ ಮನೆ ಬಾಗಿಲಿಗೆ ಬರುವ ಆಶಾ ಹಾಗೂ ಆರೊಗ್ಯಕಾರ್ಯಕರ್ತೆಯರಿಗೆ ಸಹಕರಿಸಿ ಎಂದರು. ಎಲ್ಲೆಂದರಲ್ಲಿ ಉಗುಳಬಾರದು ಹಾಗೂ ಶುಚಿತ್ವ ಮನೋಭಾವ ಬೆಳೆಸಿಕೊಳ್ಳಬೇಕು. ಅದರ ಜೊತೆಯಲ್ಲಿ ಪ್ಲಾಸ್ಟಿಕ್ ಮುಕ್ತ ಪರಿಸರವನ್ನಾಗಿ ಮಾಡಬೇಕು. ಸಾಂಪ್ರದಾಯದಿಂದ ಬಂದ ಸಂಸ್ಕೃತಿ ಉಳಿಸಿಕೊಳ್ಳಬೇಕು ಎಂದರು.

ಸ್ವಾಸ್ಥ್ಯ ಸರ್ಕಲ್ ಫೌಂಡೇಶನ್ ಅಧ್ಯಕ್ಷೆ ಡಾ. ತೋಜಾಕ್ಷಿಬಾಯಿ ಮಾತನಾಡಿ, ಬದ್ಧತೆಯಿಂದ ಚಿಕಿತ್ಸೆ ಪಡೆದರೆ ಕ್ಷಯರೋಗವು ಸಂಪೂರ್ಣವಾಗಿ ವಾಸಿಯಾಗುತ್ತದೆ ಅದಕ್ಕೆ ಪ್ರತಿಯೊಬ್ಬ ನಾಗರಿಕರು ಕೈಜೋಡಿಸಬೇಕು. ಕ್ಷಯರೋಗವು ಪ್ರಮುಖವಾಗಿ ಶ್ವಾಸಕೋಶಕ್ಕೆ ಹರಡುತ್ತದೆ. ಕ್ಷಯರೋಗವು ಜನಸಂದಣಿ ಇರುವಂತಹ ಸ್ಥಳಗಳಲ್ಲಿ ಹೆಚ್ಚಾಗಿ ಬರುವ ಸಾಧ್ಯತೆ ಇರುತ್ತದೆ. ವ್ಯಾಯಮ, ಪ್ರಾಣಾಯಾಮ ಮಾಡುವುದರಿಂದ ರೋಗ ಮುಕ್ತರಾಗಬಹುದು. ಒಳ್ಳೆಯ ಗಾಳಿ ಪಡೆಯಲು ಗಿಡ ಮರಗಳನ್ನು ಬೆಳೆಸಬೇಕು ಎಂದು ಹೇಳಿದರು.

ಧೂಮಪಾನ, ಮದ್ಯಪಾನ ಮಾಡುವುದರಿಂದ ದೇಹದಲ್ಲಿ ರೋಗನಿರೋದಕ ಶಕ್ತಿ ಕಡಿಮೆಯಾಗುವುದರಿಂದ ರೋಗಗಳು ಉಲ್ಬಣಗೊಳ್ಳುತ್ತವೆ. ಮನೆಗಳ ಸುತ್ತ-ಮುತ್ತ ಸ್ವಚ್ಛವಾದ ಪರಿಸರ ವಾತವರಣ ನಿರ್ಮಾಣ ಮಾಡಿಕೊಳ್ಳಬೇಕು. ದತ್ತು ಪಡೆದ ರೋಗಿಗಳಿಗೆ 6 ತಿಂಗಳವರೆಗೂ ಪ್ರತಿ ತಿಂಗಳು 10ನೇ ತಾರೀಖಿನಂದು ಆಹಾರದ ಕಿಟ್ ವಿತರಿಸಲಾಗುತ್ತದೆ ಎಂದು ಹೇಳಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ದತ್ತು ಪಡೆದಕೊಳ್ಳುವ ದಾನಿಗಳು ಮುಂದೆ ಬರಬೇಕು. ಮೊದಲೇ ಸಾಮಾಜಿಕ ಕಳಂಕ ಎದುರಿಸುತ್ತಿರುವ ಕ್ಷಯರೋಗ ನಿರ್ಮೂಲನೆಗೆ ಸಮುದಾಯದ ಸಹಭಾಗಿತ್ವದ ಅವಶ್ಯಕತೆ ಇದೆ. ಈಗಾಗಲೇ ಪ್ರಧಾನಮಂತ್ರಿಗಳು ನಿಕ್ಷಯ ಮಿತ್ರ ಯೋಜನೆಯಡಿ ದಾನಿಗಳು ನೋಂದಾಯಿಸಲು ಕರೆ ನೀಡಿದ್ದಾರೆ. ಅದರಂತೆ ವೈಯಕ್ತಿಕವಾಗಿ ಸಂಘ ಸಂಸ್ಥೆಗಳು ಮುಂದೆ ಬನ್ನಿ. ನಿಮ್ಮ ಮಾನವೀಯತೆ ಮೆರೆಯಿರಿ ಎಂದರು.

ಸ್ವಾಸ್ಥ್ಯ ಸರ್ಕಲ್ ಫೌಂಡೇಶನ್ ಸಂಸ್ಥೆಯು 10 ಜನ ಕ್ಷಯರೋಗಿಗಳ ದತ್ತು ಪಡೆದು ಆಹಾರ ಕಿಟ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್, ಬುದ್ಧನಗರದ ವೈದ್ಯಾಧಿಕಾರಿ ಡಾ. ಸುರೇಂದ್ರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜಾನಕಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಗುರುಮೂರ್ತಿ, ಶ್ರೀಧರ, ಗಂಗಾಧರ್, ರಂಗಾರೆಡ್ಡಿ, ಸ್ವಾಸ್ಥ್ಯ ಸರ್ಕಲ್ ಫೌಂಡೇಶನ್ ಮೂರ್ತಿಪ್ಪ ಇತರರು ಇದ್ದರು.

# ಪ್ಲಾಸ್ಟಿಕ್ ಮುಕ್ತ ನಗರ ನಿರ್ಮಾಣಕ್ಕಾಗಿ ನಗರಸಭೆಯಿಂದ ಅಭಿಯಾನ

» ಚಿತ್ರದುರ್ಗ

ಪ್ಲಾಸ್ಟಿಕ್‌ಮುಕ್ತನಗರನಿರ್ಮಾಣಕ್ಕಾಗಿ ಜಿಲ್ಲಾಡಳಿತ ಹಾಗೂ ನಗರಸಭೆ ವತಿಯಿಂದ ಜು.1 ರಿಂದ 28 ರವರೆಗೆ ನಗರದಲ್ಲಿ ಪ್ಲಾಸ್ಟಿಕ್ ಮುಕ್ತ ಅಭಿಯಾನ ಹಮ್ಮಿಕೊಳ್ಳಲಾಗಿದೆ.




ಸಂತ ಜೋಸೆಫ್ ಕಾನ್ವೆಂಟ್ ಹಾಗೂ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಅಭಿಯಾನ ಉದ್ದೇಶಿಸಿ ಮಾತನಾಡಿದ ಪರಿಸರ ತಜ್ಞ ಎಚ್.ಎಸ್. ಕೆ.ಸ್ವಾಮಿ ಪ್ಲಾಸ್ಟಿಕ್ ಬಳಸಿ ಎಲ್ಲೆಂದರಲ್ಲಿ ಎಸೆಯುವುದರಿಂದ ಪರಿಸರ ಹಾಳಾಗುತ್ತದೆ. ಎಷ್ಟು ವರ್ಷಗಳಾದರೂ ಪ್ಲಾಸ್ಟಿಕ್ ಮಣ್ಣಿನಲ್ಲಿ ಕೊಳೆಯುವುದಿಲ್ಲ. ಹಾಗಾಗಿ ಪ್ಲಾಸ್ಟಿಕ್‌ಗೆ ಪರ್ಯಾಯವಾಗಿ ಪರಿಸರ ಸ್ನೇಹಿ ಸಾಮಾಗ್ರಿಗಳನ್ನು ಬಳಸುವುದನ್ನು ಮಕ್ಕಳು ಚಿಕ್ಕಂದಿನಿಂದಲೇ ರೂಢಿಸಿಕೊಳ್ಳಬೇಕು. ವಿದೇಶಗಳಲ್ಲಿ ಮಕ್ಕಳು ಚಾಕೊಲೇಟ್ ತಿಂದು ಕವರನ್ನು ರಸ್ತೆಗೆ ಎಸೆಯುವುದಿಲ್ಲ. ಜೇಬಿನಲ್ಲಿಟ್ಟುಕೊಂಡು ಡಸ್ಟ್‌ಬಿನ್‌ಗೆ ಹಾಕುತ್ತಾರೆ. ನಮ್ಮಲ್ಲಿಯೂ ಅಂತಹ ಜಾಗೃತಿ ಬೆಳೆಸಿಕೊಳ್ಳಬೇಕು ಎಂದು ವಿದ್ಯಾರ್ಥಿನಿಯರಲ್ಲಿ ಮನವಿ ಮಾಡಿದರು.

ಪ್ರತಿಯೊಬ್ಬರು ಬಳಸಿದ ಪ್ಲಾಸ್ಟಿಕ್‌ನ್ನು ಬೀದಿಯಲ್ಲಿ ಎಸೆಯುವುದರಿಂದ ಓಜೋನ್ ಪದರ ಹಾಳಾಗಿದೆ. ಹಸಿ ಕಸ, ಒಣ ಕಸವನ್ನು ಮನೆಯಲ್ಲಿಯೇ ಬೇರ್ಪಡಿಸಿ ಪ್ರತಿನಿತ್ಯ ಬೆಳಿಗ್ಗೆ ಮನೆ ಬಾಗಿಲಿಗೆ ಬರುವ ನಗರಸಭೆಯ ಕಸದ ವಾಹನಕ್ಕೆ ಹಾಕಿ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬಹುದು ಎಂದು ಹೇಳಿದರು.ನಗರಸಭೆ ಹೆಲ್ತ್ ಇನ್ಸ್‌ಪೆಕ್ಟರ್‌ಗಳಾದ ಸರಳ, ಭಾರತಿ, ಪರಿಸರ ಇಂಜಿನಿಯರ್ ಜಾಫರ್, ಆರೋಗ್ಯ ಶಾಖೆಯ ಸಹಾಯಕಿ ತಬ್ಸಂಭಾನು, ಪೌರ ಕಾರ್ಮಿಕರು ಅಭಿಯಾನದಲ್ಲಿದ್ದರು.



**ಬೆಂಗಳೂರಿನಿಂದ ಬಳ್ಳಾರಿ ಗೆ ತೆರಳುತ್ತಿದ್ದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಬುಧವಾರ ಹಿರಿಯೂರಿನ ಪ್ರವಾಸಿ ಮಂದಿರಕ್ಕೆ ಆಗಮಿಸಿ , ಕೆಲ ಕಾಲ ವಿಶ್ರಾಂತಿ ಪಡೆದು ತಮ್ಮ ಪ್ರಯಾಣವನ್ನು ಮುಂದುವರಿಸದರು. ಬುಧವಾರ ಸಂಜೆ ಆಗಮಿಸಿದ ರಾಜ್ಯಪಾಲರನ್ನು ಜಿಲ್ಲಾಧಿಕಾರಿ ದಿವ್ಯಾಪ್ರಭು ಸ್ವಾಗತಿಸಿದರು. ಕೆಲ ಸಮಯ ವಿಶ್ರಾಂತಿ ಪಡೆದು, ತಾಲೂಕು ಆಡಳಿತದಿಂದ ಭೋಜನದ ವ್ಯವಸ್ಥೆ ಮಾಡಲಾಗಿತ್ತು. ವಿಶ್ರಾಂತಿ ನಂತರ ಬಳ್ಳಾರಿ ಗೆ ತೆರಳಿದರು. ರಾಜ್ಯಪಾಲರ ಜತೆ ರಾಜ ಭವನದ 39 ಸಿಬ್ಬಂದಿ ಆಗಮಿಸಿದ್ದರು, ಜಿಲ್ಲಾಧಿಕಾರಿ ದಿವ್ಯ ಪ್ರಭಾ, ಜಿಪಂ. ಸಿಇಒ ದಿವಾಕರ್, ಎಸ್ಪಿ ಪರಶುರಾಮ್, ತಹಶೀಲ್ದಾರ್ ಪ್ರಶಾಂತ್ ಪಾಟೀಲ್, ಡಿವೈಎಸ್ಪಿ ಚೈತ್ರಾ ಇತರರಿದ್ದರು.**

# ಟೊಮ್ಯಾಟೋ ಬೆಳೆದ ರೈತನ ಹಣಕ್ಕಾಗಿ ಕೊಲೆ ಮಾಡಿದ ದುಷ್ಕರ್ಮಿಗಳು

» ವಿಜಯವಾಡ

ದೇಶದಲ್ಲಿ ಟೊಮ್ಯಾಟೋ ಬೆಲೆ ಗಗನಮುಖಿಯಾಗಿದ್ದು, ರೈತರ ಮುಖದಲ್ಲಿ ಸಂತಸ ಉಂಟುಮಾಡಿದೆ. ಆದರೆ, ಅದೇ ಟೊಮ್ಯಾಟೋ ರೈತನೊಬ್ಬನ ಪ್ರಾಣ ಕಸಿದುಕೊಂಡಿರುವ ಕರುಣಾಜನಕ ಘಟನೆಯೊಂದು ಆಂಧ್ರ ಪ್ರದೇಶದ ಮದನಪಲ್ಲಿಯಲ್ಲಿ ನಡೆದಿದೆ. ತಮ್ಮ ಜಮೀನಿನಲ್ಲಿ ಟೊಮ್ಯಾಟೋ ಬೆಳೆದು ತುಂಬಾ ಲಾಭ ಗಳಿಸಿದನ್ನು ನೋಡಿ, ಹಣ ಸುಲಿಗೆ ಮಾಡುವ ದುರುದ್ದೇಶದಿಂದ ದುಷ್ಕರ್ಮಿಗಳು ರೈತನನ್ನು ಕೊಲೆ ಮಾಡಿರುವುದಾಗಿ ವರದಿಯಾಗಿದೆ.

ಕೊಲೆಯಾದ ರೈತನ್ನು ನರೇಮ್ ರಾಜಶೇಖರ್ ರೆಡ್ಡಿ (62) ಎಂದು ಗುರುತಿಸಲಾಗಿದೆ. ಇತ್ತೀಚೆಗಷ್ಟೇ ಇವರು 70 ಕ್ರೇಟ್ಸ್ ಟೊಮ್ಯಾಟೋವನ್ನು ಮಾರುಕಟ್ಟೆಯಲ್ಲಿ ಮಾರಿದ್ದರು.

**ಮನೆಯಿಂದ ಹೋಗಿ ಮರಳಲೇ ಇಲ್ಲ:** ಈ ಘಟನೆ ಮಂಗಳವಾರ ರಾತ್ರಿ ಮದನಪಲ್ಲಿರುವ ಗ್ರಾಮದಲ್ಲಿ ನಡೆದಿದೆ. ಮೃತ ರಾಜಶೇಖರ್ ಹಾಲು ಹಾಕಲೆಂದು ಮನೆಯಿಂದ ಹೋದವರು ಮರಳಿ ಬರಲೇ ಇಲ್ಲ. ಅನುಮಾನಗೊಂಡ ಪತ್ನಿ, ತನ್ನ ಮಗಳಿಗೆ ಹೇಳಿದಳು. ಇಬ್ಬರು ಸೇರಿ ರಾಜಶೇಖರ್‌ಗೆ ಎಷ್ಟೇ ಫೋನ್ ಮಾಡಿದರೂ ಕರೆ ಮಾತ್ರ ಸ್ವಿಕರಿಸುತ್ತಿರಲಿಲ್ಲ. ಈ ವಿಚಾರ ತಿಳಿದು ಸಂಬಂಧಿಕರೆಲ್ಲ ಸೇರಿ ರಾಜಶೇಖರ್ ಅವರನ್ನು ಹುಡುಕಾಡಲು ಆರಂಭಿಸಿದರು.

**ರಸ್ತೆ ಪಕ್ಕದಲ್ಲಿ ಮೃತದೇಹ:** ಕೆಲವು ಸಮಯದ ಬಳಿಕ ರಸ್ತೆಯ ಮಧ್ಯೆದಲ್ಲಿ ರಾಜಶೇಖರ್ ಅವರ ಬೈಕ್ ಮತ್ತು ಫೋನ್ ಪತ್ತೆಯಾಯಿತು. ಸಮೀಪದಲ್ಲಿ ಹುಡುಕಾಡಿದಾಗ ಆತನ ಕೈಕಾಲುಗಳನ್ನು ಮರಕ್ಕೆ ಕಟ್ಟಿರುವ ಸ್ಥಿತಿಯಲ್ಲಿ ಮೃತದೇಹ ಪತ್ತೆಯಾಯಿತು. ಬಳಿಕ ಪೊಲೀಸರಿಗೆ ಕರೆ ಮಾಡಿ ಮಾಹಿತಿ ತಿಳಿಸಲಾಯಿತು. ಸ್ಥಳಕ್ಕೆ ಬಂದ ಪೊಲೀಸರು ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ.

**ಹಣಕ್ಕಾಗಿ ಕೊಲೆ:** ಪ್ರಾಥಮಿಕ ತನಿಖೆಯ ಪ್ರಕಾರ ಟೊಮ್ಯಾಟೋ ಮಾರಿ ಗಳಿಸಿದ್ದ ಹಣವನ್ನು ಸುಲಿಗೆ ಮಾಡಲು ಬಂದ ದುಷ್ಕರ್ಮಿಗಳು ರಾಜಶೇಖರ್‌ರನ್ನು ಕೊಲೆ ಮಾಡಿದ್ದಾರೆಂದು ತಿಳಿಸಿದ್ದಾರೆ. ಇದೀಗ ರಾಜಶೇಖರ್ ಹತ್ಯೆ ಅವರ ಕುಟುಂಬಕ್ಕೆ ಬರಸಿಡಿಲು ಬಡಿದಂತಾಗಿದೆ. ಪತ್ನಿ ಜ್ಯೋತಿ, ಮಕ್ಕಳಾದ ಬಿಂದು ಮತ್ತು ಕೃತಿಯನ್ನು ರಾಜಶೇಖರ್ ಅಗಲಿದ್ದಾರೆ. ಮಕ್ಕಳಿಬ್ಬರು ಮದುವೆಯಾಗಿ ಬೆಂಗಳೂರಿನಲ್ಲಿ ನೆಲೆಸಿದ್ದಾರೆ. ಪ್ರತಿಕೂಲ ವಾತಾವರಣ ಪರಿಣಾಮ ಟೊಮ್ಯಾಟೋ ಬೆಲೆ ಏರಿಕೆಯಾಗಿದೆ. ಶೇ. 300 ರಷ್ಟು ಬೆಲೆ ಏರಿಕೆಯಾಗಿದೆ ಎಂದು ಗ್ರಾಹಕರ ವ್ಯವಹಾರಗಳ ಇಲಾಖೆ ತಿಳಿಸಿದೆ.

## ಪ್ರಮುಖ ಸುದ್ದಿ

# ಏಷ್ಯಾ ಕಪ್ ಪಂದ್ಯಾವಳಿಯ ವೇಳಾಪಟ್ಟಿ ಫೈನಲ್

» ನವದೆಹಲಿ

ಬಹು ನಿರೀಕ್ಷಿತ ಏಷ್ಯಾ ಕಪ್ ಪಂದ್ಯಾವಳಿಯ ವೇಳಾಪಟ್ಟಿಯನ್ನು ಕೊನೆಗೂ ಅಂತಿಮಗೊಳಿಸಲಾಗಿದೆ. ಪಾಕಿಸ್ತಾನ ಮತ್ತು ಶ್ರೀಲಂಕಾ ಆತಿಥ್ಯದಲ್ಲಿ ಆ. 31ರಿಂದ ಸೆ.17ರ ವರೆಗೆ ಇದು "ಹೈಬ್ರಿಡ್' ಮಾದರಿಯಲ್ಲಿ ನಡೆಯಲಿದೆ. ಆದರೆ ಭಾರತ ತಂಡ ಪಾಕಿಸ್ತಾನಕ್ಕೆ ತೆರಳದ ಕಾರಣ ಇತ್ತಂಡಗಳ ನಡುವಿನ ಪಂದ್ಯಗಳನ್ನು ಶ್ರೀಲಂಕಾದಲ್ಲಿ ಆಡಲಾಗುವುದು.

2010ರ ಪಂದ್ಯಾವಳಿಯಂತೆ ಈ ಪಂದ್ಯಗಳು ಡಂಬುಲದಲ್ಲಿ ನಡೆಯುವ ಸಾಧ್ಯತೆ ಇದೆ.ಏಷ್ಯಾ ಕಪ್ ವೇಳಾಪಟ್ಟಿ ಅಂತಿಮಗೊಂಡಿರುವುದನ್ನು ಐಪಿಎಲ್ ಚೇರ್ಮನ್ ಅರುಣ್ ಧುಮಾಲ್ ಬುಧವಾರ ತಿಳಿಸಿದರು. ಸದ್ಯ ಅವರು ಐಸಿಸಿ ಮುಖ್ಯ ಕಾರ್ಯನಿರ್ವಾಹಕರ ಸಭೆಯಲ್ಲಿ (ಸಿಎಸಿ) ಪಾಲ್ಗೊಳ್ಳಲು ಡರ್ಬನ್‌ಗೆ ಆಗಮಿಸಿದ್ದಾರೆ. ವೇಳಾಪಟ್ಟಿಯನ್ನು ಅಂತಿಮ ಸಮ್ಮತಿಗಾಗಿ ಕ್ರಿಕೆಟ್ ಮಂಡಳಿಗಳಿಗೆ ಕಳುಹಿಸಲಾಗಿದೆ, ಶೀಘ್ರದಲ್ಲೇ ಇದನ್ನು ಪ್ರಕಟಿಸಲಾಗುವುದು ಎಂದು ಧುಮಾಲ್ ಹೇಳಿದರು.




**ಪಾಕ್‌ನಲ್ಲಿ ನಾಲ್ಕೇ ಪಂದ್ಯ:** ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಮತ್ತು ಪಿಸಿಬಿ ಮುಖ್ಯಸ್ಥ ಝಕಾ ಅಶ್ರಫ್ ಭೇಟಿಯಾಗಿ ಏಷ್ಯಾಕಪ್ ವೇಳಾಪಟ್ಟಿಯನ್ನು ಅಂತಿಮಗೊಳಿಸಿದ್ದಾರೆ. ಇದರ ಒಪ್ಪಿಗೆ ಪಡೆಯುವ ಪ್ರಕ್ರಿಯೆ ಬಾಕಿ ಇದೆ. ಇದರಂತೆ ಪಾಕಿಸ್ತಾನದಲ್ಲಿ 4 ಲೀಗ್ ಪಂದ್ಯಗಳು, ಶ್ರೀಲಂಕಾದಲ್ಲಿ ಫೈನಲ್ ಸೇರಿದಂತೆ 9 ಪಂದ್ಯಗಳು ನಡೆಯಲಿವೆ ಎಂಬುದಾಗಿ ಧುಮಾಲ್ ವಿವರ ಒದಗಿಸಿದರು. ಇದರಂತೆ ಪಾಕಿಸ್ತಾನ ತನ್ನ ತವರಿನ ಏಕೈಕ ಪಂದ್ಯವನ್ನು ನೇಪಾಲ ವಿರುದ್ಧ ಆಡಲಿದೆ. ಪಾಕ್‌ನಲ್ಲಿ ನಡೆಯಲಿರುವ ಇತರ 3 ಪಂದ್ಯಗಳೆಂದರೆ ಅಫ್ಘಾನ್-ಬಾಂಗ್ಲಾ, ಬಾಂಗ್ಲಾ-ಲಂಕಾ ಮತ್ತು ಲಂಕಾ-ಅಫ್ಘಾನ್.

**ಭಾರತ-ಪಾಕ್ 3 ಪಂದ್ಯ?!:** ಇದು 2 ಸುತ್ತುಗಳ ಪಂದ್ಯಾವಳಿ. ಅದರಂತೆ ಭಾರತ-ಪಾಕಿಸ್ತಾನ 2 ಸಲ ಎದುರಾಗಲಿವೆ. ಫೈನಲ್ ತಲುಪಿದರೆ 3ನೇ ಮುಖಾಮುಖಿ ನಡೆಯಲಿದೆ. ಈ ಎಲ್ಲ ಪಂದ್ಯಗಳು ಶ್ರೀಲಂಕಾದಲ್ಲೇ ಸಾಗಲಿವೆ. ಇದರಿಂದ ಕುಸಿದಿರುವ ಶ್ರೀಲಂಕಾ ಕ್ರಿಕೆಟ್ ಮಂಡಳಿಯ ಆರ್ಥಿಕ ಸ್ಥಿತಿ ಪ್ರಗತಿ ಕಂಡೀತು ಎಂಬುದು ಏಷ್ಯನ್ ಕ್ರಿಕೆಟ್ ಕೌನ್ಸಿಲ್‌ನ ಆಶಾವಾದ.

ಇದೇ ವೇಳೆ, ಭಾರತ ತಂಡ ಪಾಕಿಸ್ತಾನಕ್ಕೆ ಪಯಣಿಸಲಿದೆ ಎಂಬ ಪಾಕ್ ಕ್ರೀಡಾ ಸಚಿವ ಎಹ್ಸಾನ್ ಮಜಾರಿ ಅವರ ಹೇಳಿಕೆ ಹಾಗೂ ಅಲ್ಲಿನ ಕೆಲವು ಪತ್ರಿಕೆಗಳ ವರದಿಗಳನ್ನು ಧುಮಾಲ್ ತಳ್ಳಿಹಾಕಿದರು.

**ವಿಶ್ವಕಪ್ ಆಡಲು ಪಾಕ್ ಭಾರತಕ್ಕೆ ಬರುವುದೇ?:** ಹಾಗಾದರೆ ವರ್ಷಾಂತ್ಯದ ಏಕದಿನ ವಿಶ್ವಕಪ್ ಪಂದ್ಯಾವಳಿಯಲ್ಲಿ ಆಡಲು ಪಾಕಿಸ್ತಾನ ತಂಡ ಭಾರತಕ್ಕೆ ಬರುವುದೇ? ಇದು ಅನೇಕರ ಪ್ರಶ್ನೆ. ಬರಲಿದೆ ಮತ್ತು ಬರಲೇಬೇಕು. ಏಕೆಂದರೆ, ಐಸಿಸಿಯ ಮೆಂಬರ್ ಪಾರ್ಟಿಸಿಪೇಶನ್ ಅಗ್ರಿಮೆಂಟ್'ಗೆ (ಎಂಪಿಎ) ಪಾಕಿಸ್ಥಾನ 2015ರಲ್ಲೇ ಸಹಿ ಹಾಕಿದೆ. ಇದು 8 ವರ್ಷಗಳ ಕಾಲಾವಧಿಯ ಒಪ್ಪಂದ; 2023ರ ಕೊನೆಗೆ ಮುಕ್ತಾಯಗೊಳ್ಳುತ್ತದೆ.

ಒಮ್ಮೆ ಎಂಪಿಎಗೆ ಸಹಿ ಹಾಕಿದರೆ ಆ ತಂಡ ಐಸಿಸಿಯ ಯಾವುದೇ ಕೂಟದಿಂದ ಹೊರಗುಳಿಯುವಂತಿಲ್ಲ. ಎಲ್ಲೇ ನಡೆದರೂ ಹೋಗಿ ಆಡಲೇಬೇಕು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T